# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 29 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–08–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 29 | Title- Code: KARKAN 28269 | Chitradurga | Date: 12-08-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಗಂಜಿಗುಂಟೆ ಗ್ರಾಮದ ನಿವೇಶನ ರಹಿತ ಪ್ರತಿಭಟನೆಗೆ ಮಣಿದ ಜಿಲ್ಲಾಡಳಿತ 2
ಒಳ ಮೀಸಲಾತಿ ಸಂವಿಧಾನಬದ್ಧ ಹೋರಾಟವಾಗಬೇಕು 3
ನನ್ನ ಜನರಿಗೆ ನಾನೇ ರೋಲ್ ಮಾಡಲ್ ಡಾ.ಬಿ.ಆರ್.ಅಂಬೇಡ್ಕರ್ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ವಾಲ್ಮೀಕಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಬಿ.ಜಿ.ಗೋವಿಂದಪ್ಪ ಸಲಹೆ

# ಪ್ರತಿಭೆ ಅಂಕಪಟ್ಟಿಗೆ ಸೀಮಿತಗೊಳದೆ, ಬದುಕಿನಲ್ಲಿ ಅಳವಡಿಕೆಯಾಗಲಿ: ಶಾಸಕ

» ಹೊಸದುರ್ಗ

ವಿದ್ಯಾರ್ಥಿ ಜೀವನ ಬಹಳ ಮಹತ್ತರವಾದದ್ದು, ಈ ಸಮಯದಲ್ಲಿ ನೀವು ತೆಗೆದುಕೊಳ್ಳುವ ನಿರ್ಧಾರಗಳು ನಿಮ್ಮ ಮುಂದಿನ ಭವಿಷ್ಯವನ್ನು ನಿರ್ಧರಿಸುತ್ತದೆ. ಯಾವುದೇ ದುಶ್ಚಟಗಳಿಗೆ ಬಲಿಯಾಗದೆ, ಓದುವ ಹವ್ಯಾಸದ ಮೂಲಕ ಪ್ರತಿಭಾವಂತರಾಗಿ ಬೆಳೆಯಿರಿ. ಪ್ರತಿಭೆ ಎನ್ನುವುದು ಬರೀ ಅಂಕಪಟ್ಟಿಗೆ ಮಾತ್ರ ಸೀಮಿತವಾಗದೆ, ಬದುಕಿನಲ್ಲಿಯೂ ಅಳವಡಿಕೆಯಾಗಬೇಕು. ಆದಾಗ ಜೀವನ ಸರಿಯಾದ ರೀತಿಯಲ್ಲಿ ಸಾಗಲು ಸಾಧ್ಯವೆಂದು ವಿದ್ಯಾರ್ಥಿಗಳಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಸಲಹೆ ನೀಡಿದರು.

ಪಟ್ಟಣದ ಬನಶಂಕರಿ ಬಡಾವಣೆಯಲ್ಲಿರುವ ವಾಲ್ಮೀಕಿ ಸಮುದಾಯ ಭವನದಲ್ಲಿ ತಾಲ್ಲೂಕು ನಾಯಕ ಸಮಾಜ, ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ ಮತ್ತು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ತಾಲ್ಲೂಕು ಯುವ ಘಟಕದ ವತಿಯಿಂದ ಭಾನುವಾರ ಆಯೋಜಿಸಿದ್ದ ವಾಲ್ಮೀಕಿ ಪ್ರತಿಭಾ ಪುರಸ್ಕಾರ, ಶೈಕ್ಷಣಿಕ ವೃತ್ತಿ ಮಾರ್ಗದರ್ಶನ ಮತ್ತು ನಿವೃತ್ತ ನೌಕರರ ಸನ್ಮಾನ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.



ಶಿಕ್ಷಣ ಎಂಬುದು ಆಧುನಿಕ ಜಗತ್ತಿನ ಬಹುದೊಡ್ಡ ಅಸ್ತ್ರ. ಮೌಲ್ಯಯುತ ಶಿಕ್ಷಣ ಪಡೆದ ವ್ಯಕ್ತಿ ಎಂದಿಗೂ ಸಮಾಜಕ್ಕೆ ಮಾರಕವಾಗಲಾರ. ನಿರಂತರ ಅಭ್ಯಾಸದಿಂದಾಗಿ ಅಂದುಕೊಂಡ ಗುರಿ ತಲುಪಲು ಸಾಧ್ಯವಿದೆ. ತಾಲೂಕು ನಾಯಕ ನೌಕರರ ಸಂಘದವರು ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ, ಪ್ರೋತ್ಸಾಹ ನೀಡುತ್ತಿರುವುದು ಸಂತಸದಾಯಕ ವಿಚಾರ. 1985 ರಲ್ಲಿ ಸಂಘ ಉದ್ಘಾಟನೆಯಾಗಿ ಇಲ್ಲಿಯವರೆಗೂ ನಡೆದುಕೊಂಡು ಬಂದಿದೆ. ಈ ಸಂಘ ಇಲ್ಲಿಯವರೆಗೂ ಬೆಳೆದುಕೊಂಡು ಬರಲು ಬಹಳಷ್ಟು ನೌಕರರ ಶ್ರಮವಿದೆ. ನಿಮ್ಮ ಈ ಪ್ರೋತ್ಸಾಹದಾಯಕ ಕಾರ್ಯಗಳು ಮುಂದೆಯೂ ಹೀಗೆಯೇ ನಡೆಯಲಿ, ಇದಕ್ಕೆ ನಮ್ಮ ಸಹಕಾರ ಇರುತ್ತದೆ. ಸಮುದಾಯದ ಮುಖಂಡರು ವಾಲ್ಮೀಕಿ ಭವನಕ್ಕೆ ಮೂಲ ಸೌಕರ್ಯ ಒದಗಿಸಿಯೆಂದು ಕೇಳಿದ್ದಾರೆ. ಖಂಡಿತವಾಗಿಯೂ ಅಗತ್ಯವಿರುವ ಸೌಲಭ್ಯ ಕಲ್ಪಿಸುತ್ತೇನೆ. ನನ್ನ ಎಲ್ಲಾ ಚುನಾವಣೆಗಳಲ್ಲಿ ನಾಯಕ ಸಮುದಾಯದ ಬಂಧುಗಳು ಜೊತೆಗೆ ನಿಂತು ಸಹಕಾರ ನೀಡುತ್ತಾ ಬಂದಿದ್ದಾರೆ. ನಿಮ್ಮ ಸಹಕಾರವನ್ನು ಎಂದಿಗೂ ಮರೆಯಲಾರೆ ಎಂದರು. ಪ್ರತಿಭಾನ್ವಿತ ವಿದ್ಯಾರ್ಥಿಗಳು ಮತ್ತು ನಿವೃತ್ತ ನೌಕರರನ್ನು ಸನ್ಮಾನಿಸಿ, ನಂತರ ಕಾರ್ಯಕ್ರಮವನ್ನು ಕುರಿತು ತಹಶೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ, ಶಿಕ್ಷಣ ಸಮಾಜವನ್ನು ಬದಲಾವಣೆ ಮಾಡಲಿರುವ ಬಹುದೊಡ್ಡ ಅಸ್ತ್ರ. ಮೂಲಭೂತ ಸೌಕರ್ಯಗಳೇ ಇಲ್ಲದಂತಹ ಗ್ರಾಮೀಣ ಪ್ರದೇಶದಲ್ಲಿ ಓದಿದಂತಹ ನನ್ನಂತಹ ಅದೆಷ್ಟೋ ವ್ಯಕ್ತಿಗಳು ಅಧಿಕಾರಿಯಾಗಿದ್ದರೆ, ಅದು ಶಿಕ್ಷಣದಿಂದ ಮಾತ್ರ ಸಾಧ್ಯವಾಗಿದೆ.

ಪುಟ ↘ 2

> ಬಹುದಿನಗಳಿಂದ ನಾಯಕ ಸಮುದಾಯದ ಬಂಧುಗಳು ಹಾಗೂ ಮದಕರಿ ನಾಯಕರ ಅಭಿಮಾನಿಗಳು ಹೊಸದುರ್ಗ ಪಟ್ಟಣದ ಮದಕರಿ ಸರ್ಕಲ್ ನಲ್ಲಿ ಚಿತ್ರದುರ್ಗ ನಾಯಕರಲ್ಲಿಯೇ ಪ್ರಮುಖ ಅರಸನಾಗಿ ಕೋಟೆಯನ್ನಾಳಿದ ರಾಜ ವೀರ ಮದಕರಿ ನಾಯಕರ ಪುತ್ಥಳಿ ಲೋಕಾರ್ಪಣೆ ಮಾಡಬೇಕೆಂಬ ಆಸೆ ಹೊಂದಿದ್ದರು. ಪುತ್ಥಳಿ ಅನಾವರಣಕ್ಕೆ ಈಗಾಗಲೇ ಸಿದ್ಧತೆ ನಡೆಯುತ್ತಿದ್ದು, ಎಲ್ಲಾ ಇಲಾಖೆ ಅಧಿಕಾರಿಗಳು ಇದಕ್ಕೆ ಅವಕಾಶ ಮಾಡಿಕೊಟ್ಟು ಸಹಕಾರ ನೀಡಿದ್ದಾರೆ. ನಾಯಕ ಸಮುದಾಯದ ಬಂಧುಗಳೊಂದಿಗೆ ನಾನು ಕೂಡ ಜೊತೆಯಾಗಿ ಮದಕರಿ ನಾಯಕರ ಪುತ್ಥಳಿಯನ್ನು ಲೋಕಾರ್ಪಣೆಗೊಳಿಸುವ ಕಾರ್ಯ ಮಾಡುತ್ತೇನೆ.
>
> » **ಬಿ.ಜಿ.ಗೋವಿಂದಪ್ಪ ಶಾಸಕರು ಮತ್ತು ಅಧ್ಯಕ್ಷರು ಆಹಾರ, ನಾಗರಿಕ ಸರಬರಾಜು ನಿಗಮ, ಬೆಂಗಳೂರು.**

## ಫಾಸ್ಟ್ ನ್ಯೂಸ್

### ಅಂಬಿಗ ಚೌಡಯ್ಯ ಅಭಿವೃದ್ಧಿ ನಿಗಮ : ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗಗಳ ಪ್ರವರ್ಗ–1ಕ್ಕೆ ಸೇರಿದ ಬೆಸ್ತ, ಅಂಬಿಗ, ಅಂಬಿ, ಗಂಗಾಮತ, ಕಬ್ಬಲಿಗೆ, ಕೋಲಿ ಮತ್ತು ಇದರ ಉಪಜಾತಿಗಳ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು. ಆಗಸ್ಟ್ 30 ರೊಳಗೆ ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಸ್ವಯಂ ಉದ್ಯೋಗ, ಗಂಗಾಕಲ್ಯಾಣ, ಸ್ವಾವಲಂಬಿ ಸಾರಥಿ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ, ಶೈಕ್ಷಣಿಕ ಉದ್ದೇಶಕ್ಕಾಗಿ ಹಾಗೂ ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ ಸೌಲಭ್ಯ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ http:/ambigaradevolopmentkarnatagov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080–220882 ಗೆ ಸಂಪರ್ಕಿಸಬಹುದು ಎಂದು ನಿಗದಮ ವ್ಯವಸ್ಥಾಪಕಿ ಶಿಲ್ಪಾ.ಹೆಚ್ ತಿಳಿಸಿದ್ದಾರೆ.

### ವಿಶ್ವಕರ್ಮ ಅಭಿವೃದ್ಧಿ ನಿಗಮ: ಸಾಲ ಸೌಲಭ್ಯಕ್ಕೆ ಅರ್ಜಿ

» ಚಿತ್ರದುರ್ಗ

ಹಿಂದುಳಿದ ವರ್ಗಗಳ ಪ್ರವರ್ಗ–2ಎ ಪಟ್ಟಿಯಲ್ಲಿರುವ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕಡೆಯ ದಿನವಾಗಿದೆ.

ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರ ಸಾಲ, ಅರಿವು ಶೈಕ್ಷಣಿಕ ನೇರ ಸಾಲ ಹಾಗೂ ನವೀಕರಣ ಸಾಲ, ಕನಿಷ್ಠ 2 ಎಕರೆ ಜಮೀನು ಹೊಂದಿರುವವರಿಗೆ ಗಂಗಾ ಕಲ್ಯಾಣ ಯೋಜನೆ, ಬ್ಯಾಕ್ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ನೇರ ಸಾಲ, ಸ್ವಾವಲಂಬಿ ಸಾರಥಿ, ವಾರ್ಷಿಕ ವರಮಾನ ರೂ. 8.00 ಲಕ್ಷದ ಒಳಗಿರುವ ವಿದ್ಯಾರ್ಥಿಗಳಿಗೆ ವಿದೇಶಿ ವ್ಯಾಸಂಗ ಯೋಜನೆ, ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಗಳಡಿ ಸಾಲ ಸೌಲಭ್ಯ ನೀಡಲಾಗುವುದು. ಆಸಕ್ತರು ವೆಬ್‌ಸೈಟ್ www.kaushakar.com ನಲ್ಲಿ ಅರ್ಜಿ ಸಲ್ಲಿಸಬಹುದು. ಆಗಸ್ಟ್ 31ರ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kvcdcl.karnataka.gov.in ಅಥವಾ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ: 080–22374848, 7899899039 ಹಾಗೂ ಕಚೇರಿಗೆ ಭೇಟಿ ನೀಡಬಹುದು ಎಂದು ಜಿಲ್ಲಾ ವ್ಯವಸ್ಥಾಪಕಿ ಶಿಲ್ಪಾ.ಹೆಚ್ ತಿಳಿಸಿದ್ದಾರೆ.

### ಶ್ರೀಚಿಂತಾಮಣೇಶ್ವರಸ್ವಾಮಿ ದೇವಸ್ಥಾನದ ಗೋಪುರ ಸ್ಥಾಪನೆ ಇಂದು

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿ ಹಿರೇಹಳ್ಳಿ ಶ್ರೀಚಿಂತಾಮಣೇಶ್ವರಸ್ವಾಮಿ ದೇವಸ್ಥಾನದ ನೂತನ ಗೋಪುರ ಕಳಸ ಸ್ಥಾಪನೆ ಕಾರ್ಯಕ್ರಮ ಆ.10ರಿಂದ12 ವರೆಗೂ ನಡೆಯಲಿದ್ದು, ಆ.12ರ ಮಧ್ಯಾಹ್ನ 11 ಗಂಟೆಗೆ ಜಗಲೂರು ಕಣ್ವಕುಪ್ಪೆ ತಪೋಕ್ಷೇತ್ರಶ್ರೀನಾಲ್ವಡಿ ಶಾಂತಲಿಂಗಶಿವಾಚಾರ್ಯ ಮಹಾಸ್ವಾಮೀಗಳು ಗೋಪುರ ಕಳಸಸ್ಥಾಪನೆ ನೆರವೇರಿಸುವರು ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ.

## ವಯನಾಡಿನ ಗುಡ್ಡ ಕುಸಿತ ಪ್ರಕರಣ: ನೊಂದ ನಿರಾಶ್ರಿತರಿಗೆ ಚಳ್ಳಕೆರೆ ಯುವಕ ತಂಡದಿಂದ ನೆರವು

**ಚಳ್ಳಕೆರೆ:** ಕಳೆದ ಜುಲೈ ತಿಂಗಳ 30ರ ಮಂಗಳವಾರ ರಾತ್ರಿ ಕೇರಳದ ವಯನಾಡು ಪ್ರದೇಶದಲ್ಲಿ ಗುಡ್ಡ ಕುಸಿತದಿಂದ ನೂರಾರು ಜನರು ಪ್ರಾಣಕಳೆದುಕೊಂಡು ಸುಮಾರು 300ಕ್ಕೂ ಹೆಚ್ಚು ಕುಟುಂಬಗಳು ಸಂಕಷ್ಟಕ್ಕೀಡಾಗಿದ್ದು, ವಯನಾಡು ಜಿಲ್ಲಾ ಕೇಂದ್ರ ಸ್ಥಾಪಿಸಿರುವ ನಿರಾಶ್ರಿತರ ಕೇಂದ್ರದಲ್ಲಿ ರಕ್ಷಣೆ ಪಡೆಯುತ್ತಿದ್ದಾರೆ. ಪ್ರಧಾನಮಂತ್ರಿ ನರೇಂದ್ರಮೋದಿ ಗುಡ್ಡಕುಸಿತ ಘಟನೆಯನ್ನು ಕಣ್ಣಾರೆಕಂಡು ರಾಷ್ಟ್ರೀಯ ವಿಪತ್ತು ಎಂದು ಈಗಾಗಲೇ ಘೋಷಿಸಿದ್ದಾರೆ. ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಸಂಪುಟ ಸಚಿವರು ಹಾಗೂ ವಯನಾಡು ಜಿಲ್ಲೆಯ ಜಿಲ್ಲಾಧಿಕಾರಿ, ಕನ್ನಡತಿ ದೊಡ್ಡೇರಿಯ ಆರ್.ಮೇಘಶ್ರೀ ಈಗಾಗಲೇ ನಿರಾಶ್ರಿತರ ಕೇಂದ್ರದ ಸಾವಿರಾರು ಜನರಿಗೆ ಆಶ್ರಯದ ಜೊತೆಗೆ ಹಲವಾರು ಸೌಲಭ್ಯವನ್ನು ನೀಡುವ ಮೂಲಕ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ.



### ಚಳ್ಳಕೆರೆ ಪೋಲೀಸರ ಕಾರ್ಯಚರಣೆ: ಅಂತರಾಜ್ಯ ಗಾಂಜಾ ಪೇಡ್ಲರ್ ಒಡಿಶಾದ ಬಾಜೂಜಿ ಸುಬುದಿ ಬಂಧನ

» ಚಳ್ಳಕೆರೆ



ಕರ್ನಾಟಕವೂ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಅಕ್ರಮವಾಗಿ ಬಾರಿ ಪ್ರಮಾಣದ ಗಾಂಜಾವನ್ನು ಮಾರಾಟ ಮಾಡಿ ಪೊಲೀಸರ ಕೈಗೆ ಸಿಗದೆ ಓಡಾಡುತ್ತಿದ್ದ ಒಡಿಶಾ ರಾಜ್ಯದ ಗೊಲಂತಾರ ಗಂಜಂಪ್ರದೇಶದ ಸುಮಂಡಿ ನಿವಾಸಿ ಎ.ಬಾಜೂಜಿ ಸುಬುದಿ ಎಂಬುವವನ್ನು ಚಾಣಾಕ್ಷಾತನದಿಂದ ಚಳ್ಳಕೆರೆ ಪೊಲೀಸರು ಬಂಧಿಸಿದ್ದಾರೆ. ಜಿಲ್ಲಾ ರಕ್ಷಣಾಧಿಕಾರಿ, ಹೆಚ್ಚುವರಿ ರಕ್ಷಣಾಧಿಕಾರಿಗಳ ಸೂಚನೆಯಂತೆ ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ಮತ್ತು ಠಾಣಾ ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ ಮಾರ್ಗದರ್ಶನದಂತೆ ಪಿಎಸ್ಐ ಕೆ.ಸತೀಶ್‌ನಾಯ್ಕ, ಸಿಬ್ಬಂದಿ ಕೊಂಡ್ಲಿಮಂಜುನಾಥ, ಶಿವರಾಜ್ ಅಂತರಾಜ್ಯ ಗಾಂಜಾ ಮಾರಾಟಗಾರರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಪುಟ ↘ 3

**ಪ್ರಮುಖ ಸುದ್ದಿ**

ನಿವೃತ್ತ ನೌಕರರ ಸಂಘದ ಸರ್ವಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಶಾಸಕ ರಘುಮೂರ್ತಿ ಹೇಳಿಕೆ


# ನೀವು ಮಾಡಿದ ಪ್ರಾಮಾಣಿಕ ಸೇವೆ ಸದಾ ಗೌರವಿಸುವೆ

» ಚಳ್ಳಕೆರೆ

ನಿವೃತ್ತ ನೌಕರರ ಗಿರಿಧಾಮ ನಿವೇಶನವನ್ನು ನನ್ನ ಅನುದಾನದಲ್ಲಿ ನೀಡುವ ಭರವಸೆಯನ್ನು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ನೀಡಿದರು.

ಅವರು, ಭಾನುವಾರ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಚಳ್ಳಕೆರೆ ತಾಲ್ಲೂಕು ನಿವೃತ್ತ ನೌಕರರ ಸಂಘದ 2023–24ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನೀವೆಲ್ಲರೂ ಸೇವೆಯಿಂದ ನಿವೃತ್ತರಾಗಿ ವಿಶ್ರಾಂತಿಯಲ್ಲಿದ್ದೀರಿ, ಆದರೂ ನಿಮ್ಮಲ್ಲಿ ಕ್ರಿಯಾಶೀಲತೆ ಕಡಿಮೆಯಾಗಿಲ್ಲ. ಇಂದಿನ ಸಭೆಯಲ್ಲಿ ಎಲ್ಲೂ ಉತ್ಸಾಹದಿಂದ ಭಾಗವಹಿಸಿದ್ದೀರಿ, ಕಳೆದ ಎರಡು ವರ್ಷಗಳ ಹಿಂದೆ ನಿವೃತ್ತಿ ನೌಕರರ ಸಂಘಕ್ಕೆ ಹೆಚ್ಚುವರಿಯಾಗಿ ಕೊಠಡಿ ನೀಡಿದ್ದೆ. ಮುಂದಿನ ದಿನದಲ್ಲೂ ನಿಮ್ಮ ಚಟುವಟಿಕೆಗೆ ಪೂರಕವಾಗುವ ಯಾವುದೇ ಬೇಡಿಕೆ ಇದ್ದರೂ ಈಡೇರಿಸುವ ಭರವಸೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಂ.ಕರಿಯಪ್ಪ ಮಾತನಾಡಿ, ನಿವೃತ್ತ ನೌಕರರ ವಾರ್ಷಿಕ ಮಹಾಸಭೆಗೆ ಹಲವಾರು ಕಾರ್ಯಕ್ರಮಗಳ ನಡುವೆಯೂ ಶಾಸಕರು ಆಗಮಿಸಿ ಸಂಘದ ಚಟುವಟಿಕೆಗಳ ಬಗ್ಗೆ ಮೆಚ್ಚುಗೆ ಮಾತಾಡಿದ್ದಾರೆ. ಕಳೆದ ಹಲವಾರು ವರ್ಷಗಳಿಂದ ನಿವೃತ್ತ ನೌಕರರ ಸಂಘ ತಮ್ಮದೇಯಾದ ಚಟುವಟಿಕೆಯನ್ನು ಪ್ರಾಮಾಣಿಕವಾಗಿ ಮಾಡುತ್ತಾ ಬಂದಿದೆ. ಕೆಲವೊಂದು ಸಮಾಜಮುಖಿ ಚಟುವಟಿಕೆಯನ್ನೂ ಸಹ ಹಮ್ಮಿಕೊಂಡಿದೆ. ಮುಂದಿನ ದಿನಗಳಲ್ಲೂ ಉತ್ತಮ ಕಾರ್ಯಕ್ರಮಗಳನ್ನು ರೂಪಿಸುವ ಚಿಂತನೆ ನಮ್ಮದು ಎಂದರು.





ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಲಿಂಗೇಗೌಡ, ಚಿತ್ರದುರ್ಗ ಜಿಲ್ಲಾಧ್ಯಕ್ಷ ಆರ್.ರಂಗಪ್ಪರೆಡ್ಡಿ, ಹೊಳಲ್ಕೆರೆ ಅಧ್ಯಕ್ಷ ಗಂಗಾಧರಪ್ಪ, ಹಿರಿಯೂರು ಅಧ್ಯಕ್ಷ ಏಕಾಂತಪ್ಪ, ಹೊಸದುರ್ಗ ಅಧ್ಯಕ್ಷ ಸಿ.ಅಂಜಿನಪ್ಪ, ಮನೋರಂಜನಾ ಕ್ಲಬ್ ಅಧ್ಯಕ್ಷ ಪಿ.ಅಜ್ಜಪ್ಪ, ಉಪಾಧ್ಯಕ್ಷ ಎಚ್. ಮುಷ್ಕರಪ್ಪ, ಕಾರ್ಯದರ್ಶಿ ಬಿ.ಕೆ. ತಿಪ್ಪೇಸ್ವಾಮಿ, ಬಿ.ಎಸ್.ವಿಶ್ವನಾಥ, ಡಿ.ರಾಮಣ್ಣ, ಪ್ರಧಾನ ಕಾರ್ಯದರ್ಶಿ ಜಿ.ಮೂಡಲಗಿರಿಯಪ್ಪ, ಖಜಾಂಚಿ ಟಿ.ಎಸ್.ಬಸವರಾಜು, ಗುರುಸಿದ್ದಸ್ವಾಮಿ, ತೇಜೋಮಯರೆಡ್ಡಿ, ವೈ.ಗಂಗಾಧರಪ್ಪ, ಸೈಯದ್ ಇಸ್ಮಾಯಿಲ್, ಎಚ್.ವಿ.ರಾಮರೆಡ್ಡಿ ಉಪಸ್ಥಿತರಿದ್ದರು. ನಿವೃತ್ತರಾದ ಸುಮಾರು 19 ಜನ ನೌಕರರನ್ನು ಸನ್ಮಾನಿಸಲಾಯಿತು.


## ಫಾಸ್ಟ್ ನ್ಯೂಸ್

### ಪ್ರತಿಭೆ ಅಂಕಪಟ್ಟಿಗೆ ಸೀಮಿತಗೊಳದೆ, ಬದುಕಿನಲ್ಲಿ ಅಳವಡಿಕೆ ಆಗಲಿ: ಶಾಸಕ

» ಮೊದಲ ಪುಟದಿಂದ

ಬರೀ ಅಂಕಗಳಿಕೆ ಆಧಾರಿತ ಶಿಕ್ಷಣದಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗದು, ಒಳ್ಳೆಯ ಸಂಸ್ಕಾರ, ಮೌಲ್ಯಯುತ ಶಿಕ್ಷಣ ದೊರೆತಾಗ ಸಮಾಜ ಪರಿವರ್ತನೆಯಾಗಲು ಸಾಧ್ಯ. ಖಾಸಗಿ ಶಾಲೆಗಳಲ್ಲಿಯೇ ಓದಿದರೆ ಮಾತ್ರ, ಸರ್ಕಾರಿ ನೌಕರಿ ತೆಗೆದುಕೊಳ್ಳ ಬಹುದೆಂಬ ಮನಸ್ಥಿತಿಯನ್ನು ಪೋಷಕರು ಬಿಡಬೇಕು. ಸರ್ಕಾರಿ ಶಾಲೆಗಳಲ್ಲಿಯೇ ಓದಿ ಬಹುದೊಡ್ಡ ಸರ್ಕಾರಿ ನೌಕರಿಯಲ್ಲಿ ತೆಗೆದುಕೊಂಡವರೇ ಬಹಳಷ್ಟು ಜನರಿದ್ದಾರೆ. ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ಹೊರಬಂದು, ಪುಸ್ತಕ ಪ್ರೇಮಿಗಳಾಗಿ ಅಧ್ಯಯನ ಶೀಲತೆ ಬೆಳೆಸಿಕೊಂಡು ನಿರಂತರವಾಗಿ ಓದಿದರೆ, ಅಂದುಕೊಂಡ ಗುರಿ ಮುಟ್ಟಲು ಸಾಧ್ಯ. ಚಟ ಮತ್ತು ಕೆಟ್ಟ ಹವ್ಯಾಸಗಳು ನಿಮ್ಮ ಮಾನಸಿಕ ನೆಮ್ಮದಿ ಹಾಳುಮಾಡುತ್ತವೆ. ಕಷ್ಟ ಅಂತ ಕೈಕಟ್ಟಿ ಕುಳಿತರೆ, ಅದು ಬದಲಾಗುವುದಿಲ್ಲ. ಪರಿವರ್ತನೆಯ ಹಾದಿಯಲ್ಲಿ ಸಾಗಬೇಕು. ಸಾಧಕರಿಗೆ ಕಷ್ಟಕಾರ್ಪಣ್ಯಗಳು ಅಡ್ಡಿಯಾಗಲಾರವು. ನಮ್ಮಲ್ಲಿ ನಿತ್ಯವೂ ಒಂದು ಸಣ್ಣ ಬದಲಾವಣೆಯಾದರೆ, ಜೀವನದಲ್ಲಿ ಸುಧಾರಣೆಯನ್ನು ಕಾಣಲು ಸಾಧ್ಯವಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮದ ಮುಖ್ಯ ಭಾಗವಾಗಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ನಂತರ ನಾಯಕ ಸಮುದಾಯಕ್ಕೆ ಸೇವೆ ಸಲ್ಲಿಸಿದ್ದ ಕೋಡಿಹಳ್ಳಿ ನಾಗೇಂದ್ರಪ್ಪನವರಿಗೆ ಮರಣೋತ್ತರವಾಗಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಲಾಯಿತು. ಈ ಪ್ರಶಸ್ತಿಯನ್ನು ನಾಗೇಂದ್ರಪ್ಪನವರ ಮಗ ಯುವರಾಜ್ ಅವರು ಪಡೆದುಕೊಂಡರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜಯಪ್ರಕಾಶ್ ವಹಿಸಿದ್ದರು. ಪ್ರಸ್ತಾವಿಕವಾಗಿ ಪ್ರಧಾನ ಕಾರ್ಯದರ್ಶಿ ಮೈಲಾರಪ್ಪ ಮಾತನಾಡಿದರು. ವೇದಿಕೆ ಮೇಲಿನ ಅತಿಥಿಗಳನ್ನ ಕ್ಷೇತ್ರ ಸಮನ್ವಯಾಧಿಕಾರಿ ಶ್ರೀನಿವಾಸ್ ಸ್ವಾಗತಿಸಿದರು. ಪರಮ್ಮ ಮತ್ತು ಮಂಜುಳಾ ಕಾರ್ಯಕ್ರಮವನ್ನು ನಿರೂಪಿಸಿದರು. ಅಮೃತವರ್ಷಿಣಿ ಕಲಾ ಸಂಘದವರು ಸಂಗೀತಗಾಯನ ನಡೆಸಿಕೊಟ್ಟರು. ಈ ವೇಳೆ ತಾಲ್ಲೂಕು ನಾಯಕ ಸಮಾಜ ಅಧ್ಯಕ್ಷ ರಂಗನಾಥ್, ಖಜಾಂಚಿ ಜಯಣ್ಣ, ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಉಪಾಧ್ಯಕ್ಷ ತುಂಬಿನಕೆರೆ ಬಸವರಾಜ್, ತಾಲೂಕು ಯುವಘಟಕದ ಅಧ್ಯಕ್ಷ ಅರುಣ್ ಗಂಗಾಧರಪ್ಪ, ಸಹಾಯಕ ಸರ್ಕಾರಿ ಅಭಿಯೋಜಕ ರುದ್ರಮುನಿ, ಗ್ರೇಡ್–ಬಿ ತಹಸೀಲ್ದಾರ್ ಪಾಲಯ್ಯ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಾಂತಪ್ಪ, ತಾ.ಪಂ. ಸಹಾಯಕ ನಿರ್ದೇಶಕ ಶಿವಮೂರ್ತಿ ಮತ್ತು ಬೆಸ್ಕಾಂ ಜೂನಿಯರ್ ಇಂಜಿನಿಯರ್ ಮಧು ಸೇರಿದಂತೆ ನೌಕರರ ಸಂಘದ ಪದಾಧಿಕಾರಿಗಳು, ನಾಯಕ ಸಮುದಾಯದ ಮುಖಂಡರು ಮತ್ತು ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ವಯನಾಡಿನ ಗುಡ್ಡ ಕುಸಿತ ಪ್ರಕರಣ: ನೊಂದ ನಿರಾಶ್ರಿತರಿಗೆ ಯುವಕ ತಂಡದಿಂದ ನೆರವು



» ಮೊದಲ ಪುಟದಿಂದ

ಕರ್ನಾಟಕವೂ ಸೇರಿದಂತೆ ದೇಶದ ಇತರೆ ಕಡೆಗಳಿಂದ ಆಹಾರ ಸಾಮಾಗ್ರಿ, ಬಟ್ಟೆ, ಔಷಧ, ಚಪ್ಪಲಿ, ಬಕೆಟ್, ತಂಬಿಗೆ, ಬೆಡ್‌ಶೀಟ್ ಮುಂತಾದ ವಸ್ತುಗಳನ್ನು ಸಂಗ್ರಹಿಸಿ ವಯನಾಡಿನ ನಿರಾಶ್ರಿತ ಕೇಂದ್ರಕ್ಕೆ ತಲುಪಿಸುವ ಕಾರ್ಯ ಭರದಿಂದ ಸಾಗುತ್ತಿದೆ. ಈ ಮದ್ಯೆ ವಯನಾಡಿನ ನಿರಾಶ್ರಿತ ಕೇಂದ್ರಕ್ಕೆ ಚಳ್ಳಕೆರೆ ನಗರಸಭಾ ಸದಸ್ಯರಾದ ಟಿ.ಮಲ್ಲಿಕಾರ್ಜುನ್, ಎಚ್.ಪ್ರಶಾಂತ್‌ಕುಮಾರ್(ಪಚ್ಚಿ), ಕೆಡಿಪಿ ನಾಮಿನಿ ಸದಸ್ಯ ಸುರೇಶ್‌ಕುಮಾರ್, ಯುವ ಮುಖಂಡ ಎಸ್.ಎಂ.ನಭಿ, ಬೇಕರಿವಿಜಯ್, ರಂಜಿತ್‌ಕುಂಚಂ, ವಾಸಿಂ, ಪೈಜಾನ್ ಮುಂತಾದವರು ಸುಮಾರು ಎರಡು ಲಕ್ಷ ಮೌಲ್ಯದ ಬಟ್ಟೆ, ಬರೆ, ಔಷಧ, ಆಹಾರ ಸಾಮಾಗ್ರಿಗಳನ್ನು ವಯನಾಡಿನ ನಿರಾಶ್ರಿತ ಕೇಂದ್ರಕ್ಕೆ ಟಾಟಾ ಎಸಿ ವಾಹನದ ಮೂಲಕ ನೇರವಾಗಿ ಅಲ್ಲಿನ ನಿರಾಶ್ರಿತರ ಕೇಂದ್ರಕ್ಕೆ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ವಯನಾಡಿನ ದುರಂತಕ್ಕೆ ಉದಾರವಾಗಿ ವಸ್ತುಗಳನ್ನು ನೀಡಿದ ಎಲ್ಲರಿಗೂ ಚಳ್ಳಕೆರೆ ಬಾಯ್ಸ್ ತಂಡ ಅಭಿನಂದನೆ ಸಲ್ಲಿಸಿದೆ.

# ಯುವ ಸಮುದಾಯಕ್ಕೆ ರಾಜೀವ್ ಮಾದರಿ

» ಚಿತ್ರದುರ್ಗ

ರಾಜೀವಗಾಂಧಿಯವರು ಇನ್ನಷ್ಟು ವರ್ಷ ಬದುಕಿದಿದ್ದರೆ ದೇಶಕ್ಕೆ ಉತ್ತಮ ಆಡಳಿತ ನೀಡುವುದರ ಜತೆ ಉನ್ನತ ಸ್ಥಾನಕ್ಕೆ ತೆಗೆದುಕೊಂಡು ಹೋಗುತ್ತಿದ್ದರು ಎಂದು ರಾಜ್ಯಸಭೆ ಮಾಜಿ ಸದಸ್ಯ ಎಚ್. ಹನುಮಂತಪ್ಪ ತಿಳಿಸಿದ್ದಾರೆ.

ಶ್ರೀಪೆರಂಬದೂರಿನಿಂದ ಕಳೆದ 9 ರಿಂದ ಪ್ರಾರಂಭವಾಗಿರುವ ರಾಜೀವಗಾಂಧಿ ಸದ್ಭಾವನಾ ಯಾತ್ರೆಯೂ ಕ್ವಿಟ್ ಇಂಡಿಯಾ ಚಳುವಳಿಯ ದಿನದಂದು ಭಯೋತ್ಪಾದನೆ ತೊರೆಯಿರಿ ಎಂಭ ಘೋಷಣೆಯೊಂದಿಗೆ ಆಗಲಿದ ನಾಯಕ ಮಾಜಿ ಪ್ರಧಾನಮಂತ್ರಿ ರಾಜೀವಗಾಂಧಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲು ಆ.19 ರಂದು ನವದೆಹಲಿಯನ್ನು ತಲುಪಲಿದೆ ದಾರಿ ಮಧ್ಯದಲ್ಲಿ ಭಾನುವಾರ ಚಿತ್ರದುರ್ಗಕ್ಕೆ ಆಗಮಿಸಿದ ಜ್ಯೋತಿಯನ್ನು ಡಿಸಿಸಿವತಿಯಿಂದ ಸ್ವಾಗತಿಸಿ ನಂತರ ನಡೆದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಈಗ ನಾನು ಇಲ್ಲಿ ಬದುಕಿದ್ದೇನೆ ಎಂದರೆ ಅದಕ್ಕೆ ರಾಜೀವಗಾಂಧಿ ಕಾರಣರಾಗಿದ್ದಾರೆ ಏಕೆಂದರೆ ಅಂದು ಅವರ ಹತ್ಯೆಯಾದ ದಿನದಂದು ನಾನು ಸಹಾ ಅವರ ಜೊತೆಯಲ್ಲಿ ಇದ್ದೇ. ಆದರೆ ಏನೋ ಕಾರಣದಿಂದ ಕಾರ್ಯಕ್ರಮ ನಡೆಯುವ ದಿನದಂದು ನಾನು ಹೋಗಬೇಕಾಯಿತು, ಇದರಿಂದ ನಾನು ಬದುಕಿದ್ದೇನೆ ಇಲ್ಲವಾದ್ದರೆ ಅಂದೇ ನಾನು ಸಹಾ



ಮರಣವನ್ನು ಹೊಂದಬೇಕಿತ್ತು ಎಂದು ಅಂದಿನ ದಿನವನ್ನು ಸ್ಮರಿಸಿದರು.

ರಾಜೀವಗಾಂಧಿಯವರು ತಮ್ಮ ಅಧಿಕಾರದಲ್ಲಿದ್ದಾಗ ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ. 18 ವಯಸ್ಸಿಗೆ ಯುವಜನಾಂಗಕ್ಕೆ ಮತದಾನ ಹಕ್ಕನ್ನು ನೀಡಿದರು. ಪಂಚಾಯತ್ ರಾಜ್ ವ್ಯವಸ್ಥೆಯನ್ನು ಜಾರಿ ಮಾಡುವುದರ ಮೂಲಕ ಆಡಳಿತದಲ್ಲಿ ವಿಭಜನೆಯನ್ನು ಮಾಡಿ ಸುಗಮವಾದ ಆಡಳಿತಕ್ಕೆ ದಾರಿ ಮಾಡಿಕೊಟ್ಟರು. ಇದ್ದಲ್ಲದೆ ಈಗ ನಾವು ಉಪಯೋಗಿಸುತ್ತಿರುವ ಮೊಬೈಲ್ ಪೋನ್ ಸಹಾ ಇವರ ಆಧಿಕಾರದಲ್ಲಿಯೇ ತರಲಾಯಿತು.

ರಾಜೀವ ಗಾಂಧಿ ಯವರಿಗೆ ರಾಜಕೀಯಕ್ಕೆ ಬರಲು ಆಸಕ್ತಿ ಇರಲಿಲ್ಲ ಆದರೆ ಅನಿವಾರ್ಯ ಕಾರಣದಿಂದಾಗಿ ರಾಜಕೀಯಕ್ಕೆ ಬರಬೇಕಾಯಿತು, ತಮ್ಮ ಆಧಿಕಾರದ ಕಡಿಮೆ ಅವಧಿಯಲ್ಲಿಯೇ ಉತ್ತಮವಾದ ಆಡಳಿತವನ್ನು ನೀಡಿದರು ಎಂದರು.ರಾಜೀವಗಾಂಧಿ ಯಾತ್ರಾ, ಸಮಿತಿಯು ಭಯೋತ್ಪಾದನೆ ವಿರೋಧಿ ಸಂದೇಶವನ್ನು ಸಾರುತ್ತದೆ. ರಾಷ್ಟ್ರವನ್ನು ನಿರ್ಮಿಸಲು ದೇಶದ ಏಕ್ಯತೆಯನ್ನು ಬಲಪಡಿಸಲು ರಾಜೀವಗಾಂಧಿಯವರ ಕೊಡುಗೆಯನ್ನು ಸಾರುತ್ತದೆ. ರಾಜೀವ್ ಜ್ಯೋತಿ ಸದ್ಭವನಾ ಯಾತ್ರೆ ಸಹೋದರತ್ವದ ಸಂದೇಶವನ್ನು ಸಾರುತ್ತದೆ.

ಏಕತೆ ಮತ್ತು ಭಯೋತ್ಪಾದನೆ ವಿರುದ್ದ ಧೃಡವಾದ ಕ್ರಮ ಜನರಲ್ಲಿ ಜಾಗೃತಿಯನ್ನು ಮೂಡಿಸುತ್ತದೆ. ನಮ್ಮ ದೇಶದಲ್ಲಿ ಭಯೋತ್ಪಾದನೆಯ ಆಪಾಯಕಾರಿ ಚಟುವಟಿಕೆಗಳು ನಿಲ್ಲಬೇಕಿದೆ. ಇದರ ಬಗ್ಗೆ ಜಾಗೃತಿಯನ್ನು ಮೂಡಿಸಬೇಕಿದೆ. ರಾಜೀವಗಾಂಧಿಯವರು ಈಗ ಇರಬೇಕಿತ್ತು, ಇದ್ದ ದಿನದಲ್ಲಿ ಉತ್ತಮವಾದ ಕಾರ್ಯವನ್ನು ಮಾಡಿದ್ದಲ್ಲದೆ ಯುವ ಜನಾಂಗಕ್ಕೆ ಪ್ರೋತ್ಸಾಹವನ್ನು ನೀಡಿದರು. ಸರ್ಕಾರದ ಕಾರ್ಯಕ್ರಮಗಳನ್ನು ಬದಲಾವಣೆ ಮಾಡಿದರು.

ರಾಜೀವಗಾಂಧಿಯವರು ಇಂದಿನ ದಿನಮಾನದಲ್ಲಿ ಬದುಕಿದ್ದರೆ ಭಾರತದ ರಾಜಕೀಯ ಚಿತ್ರಣವೇ ಬದಲಾಗುತ್ತಿತ್ತು ಎಂದು ಹನುಮಂತಪ್ಪ ತಿಳಿಸಿದರು. ರಾಜೀವಗಾಂಧಿ ಜ್ಯೋತಿ ಯಾತ್ರಾ ಸಮಿತಿಯ ಅಧ್ಯಕ್ಷ ಆರ್.ದೊರ್ರೈ, ಶ್ರೀನಿವಾಸಪ್ಪ, ಕಾಂಗ್ರೆಸ್ ಐಯ್ಯರ್ ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್‌ಕುಮಾರ್, ಮೈಲಾರಪ್ಪ, ಪ್ರಕಾಶ್, ನಜ್ಮಾತಾಜ್, ಲಕ್ಷ್ಮೀಕಾಂತ್, ಕಾಂಗ್ರೆಸ್‌ನ ಕಾರ್ಮಿಕ ವಿಭಾಗದ ಜಾಕಿರ್, ಪೈಲ್ವಾನ್ ತಿಪ್ಪೇಸ್ವಾಮಿ ಸೇರಿದಂತೆ ಇತರರು ಭಾಗವಹಿಸಿದ್ದರು

## ಸಾಧನೆಗೆ ದೊಡ್ಡ ಗುರಿ ಇರಲಿ: ವೆಂಕಟೇಶ್ ಬಾಬು

» ದಾವಣಗೆರೆ

ನಗರದಆದಿಕೇಶವಅಕಾಡೆಮಿಅಸೋಸಿಯೇಟೆಡ್ ವಿತ್ ಎಂ ಈ ಎಸ್ ಪಿಯು ಕಾಲೇಜು ಮತ್ತು ಶಾಹಿದ್ ಫಾಲ್ಕಾನ್ ಪಿಯು ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ' ಆರಂಬ – 2024 ಫ್ರೆಷರ್ಸ್ ಡೇ' ಎಂಬ ಶೈಕ್ಷಣಿಕ ವರ್ಷದ ಸ್ವಾಗತ ಕಾರ್ಯಕ್ರಮ ಜರುಗಿತ್ತು. ಈ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಪ್ರಥಮ ಪಿಯುಸಿ ವಿದ್ಯಾರ್ಥಿಗಳನ್ನು ಸ್ವಾಗತಿಸಿಕೊಂಡರು. ಕಾರ್ಯಕ್ರಮದ ಪ್ರಸ್ತಾವಿಕ ನುಡಿಯನ್ನು ಆದಿ ಕೇಶವ ಅಕಾಡೆಮಿಯ ಕಾರ್ಯದರ್ಶಿಗಳಾದ ಜ್ಯೋತಿ ಕುಮಾರ್ ರವರು ನೆರವೇರಿಸಿ ಕೊಟ್ಟರು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ದಾವಣಗೆರೆ ನಗರ ಪಾಲಿಕೆಯ ಮಾಜಿ ಮೇಯರ್ ಮತ್ತು ಕಾರ್ಪೊರೇಟರ್ ಶ್ರೀಯುತ ಅಜಯ್ ಕುಮಾರ್ ಬಿ ಜಿ ರವರು ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಂದೆ ತಾಯಿಗಳನ್ನು ಗೌರವಿಸಬೇಕು ಮತ್ತು ಅವರ ಕನಸುಗಳನ್ನು ನನಸಾಗಿಸಬೇಕು ಎಂದು ಮುಖ್ಯ ಅತಿಥಿಗಳ ಭಾಷಣವನ್ನಾಡಿದರು. ಕಾರ್ಯಕ್ರಮಕ್ಕೆ ಮತ್ತೊಬ್ಬ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಮತ್ತು ಮೋಟಿವೇಷನಲ್ ಸ್ಪೀಕರ್ ಎಂದೇ ಖ್ಯಾತಿಯಾಗಿರುವ ಡಾ. ವೆಂಕಟೇಶ್ ಬಾಬು ಎಸ್ ರವರು ವಿದ್ಯಾರ್ಥಿಗಳಿಗೆ ಸತತ ಪ್ರಯತ್ನ, ನಂಬಿಕೆ, ಗುರಿಯನ್ನು ಹೇಗೆ ಸಾಧಿಸಬೇಕು

ದೃಢ ಪ್ರಯತ್ನದಿಂದಲೇ ಸಾಧನೆ ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಪ್ರೇರೇಪಿಸಿದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿದ ಕರುಣಾಕರನ್ ನಿವೃತ್ತ ಪ್ರಾಂಶುಪಾಲರು



ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಪ್ರಥಮ ದರ್ಜೆ ಕಾಲೇಜು ಹರಿಹರ ಗಳನ್ನು ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಧಿಕೇಶವ ಅಕಾಡೆಮಿಯ ನಿರ್ದೇಶಕರಾದ ಧನರಾಜ್ ರವರು ವಹಿಸಿಕೊಂಡಿದ್ದರು. ಕಾರ್ಯಕ್ರಮದಲ್ಲಿ ಶಾಹಿನ್ ಫಾಲ್ಕನ್ ಕಾಲೇಜಿನ ಅಧ್ಯಕ್ಷರಾದ ದಾದಾಪೀರ್ ರವರು, ಕಾಲೇಜಿನ ಪ್ರಾಂಶುಪಾಲರಾದ ನಾಗರಾಜ್ ರವರು, ಆದಿಕೇಶವ ಅಕಾಡೆಮಿಯ ನಿರ್ದೇಶಕರಾದ ಬಲ್ಲೂರು ಬಸವರಾಜ್, ಎಂಸಿ ಸುಜಾತ, ಮಲ್ಲೇಶಪ್ಪ , ಪವನ್ , ಮತ್ತು ಎಂಇಎಸ್ ಕಾಲೇಜಿನ ನಿರ್ದೇಶಕರಾದ ಪ್ರದೀಪ್ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ಸತೀಶ್, ಮಲ್ಲೇಶ್ ಎಂ ನಾಯ್ಕ, ಅನಿಲ್, ನಿರಂಜನ್, ರಾಜೇಶ್, ದಸ್ತಗಿರ, ನಾಗರಾಜ ,ಆಶಾ ,ಮೋನಿಕಾ, ಕೋಮಲ, ಮೇಘನ, ಶಿವಾನಿ, ಜ್ಯೋತಿ ,ಭಾಗ್ಯ ಶುಭ ಬೋಧಕೇತರ ವರ್ಗದವರು ಉಪಸ್ಥಿತರಿದ್ದರು. ಸ್ವಾಗತ ಕಾರ್ಯಕ್ರಮವು ಬಹಳಷ್ಟು ವಿಜೃಂಭಣೆಯಿಂದ ಸಾಂಸ್ಕೃತಿಕವಾಗಿ ನೃತ್ಯ ಹಾಡು ಮತ್ತು ವಿದ್ಯಾರ್ಥಿಗಳು ಕುಣಿದು ಕುಪ್ಪಳಿಸಿದರು. ಕಾರ್ಯಕ್ರಮಗಳಲ್ಲಿ ಎಲ್ಲಾ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಮತ್ತು ಪೋಷಕರು ಭಾಗವಹಿಸಿದ್ದರು.

ನಿರೂಪಣೆಯನ್ನುವಿದ್ಯಾರ್ಥಿಗಳಾದಭೂಮಿಕಾ ಮತ್ತು ಅನ್ನಪೂರ್ಣ ನೆರವೇರಿಸಿಕೊಟ್ಟರು.

## ಜ್ಞಾನ ಗಂಗೋತ್ರಿ ಅಂತರ ವಿಭಾಗ ಕ್ರೀಡಾಕೂಟಕ್ಕೆ ಚಾಲನೆ



» ಚಿತ್ರದುರ್ಗ

ಇಂದಿನ ದಿನಮಾನದಲ್ಲಿ ಪೋಷಕರು ತಮ್ಮ ಮಕ್ಕಳನ್ನು ಐ.ಟಿ., ಬಿ.ಟಿ. ಇಂಜಿನಿಯರ್, ಡಾಕ್ಟರ್ ನ್ಯಾಯಾವಾದಿ, ಸೇರಿದಂತೆ ಇತರೆ ಉದ್ಯೋಗದಲ್ಲಿ ನೋಡಲು ಇಚ್ಚೆ ಪಡುತ್ತಾರೆ ಹೊರೆತು ಯಾರು ಸಹಾ ತಮ್ಮ ಮಕ್ಕಳು ಕ್ರೀಡಾಪಟುವಾಗಲಿ ಎಂದು ಆಶಿಸುವುದಿಲ್ಲ ಇದು ನಮ್ಮ ದುರಂತ ಇದರಿಂದ ಭಾರತ ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಹಿಂದೆ ಉಳಿಯಲು ಕಾರಣವಾದ ಪ್ರಮುಖ ಅಂಶಗಳಲ್ಲಿ ಇದು ಕೂಡ ಒಂದು. ಎಂದು ಅಂತರಾಷ್ಟ್ರೀಯ ಪದಕ ವಿಜೇತ ಕ್ರೀಡಾಪಟು ಎನ್.ಡಿ. ಕುಮಾರ್ ತಿಳಿಸಿದ್ದಾರೆ. ದಾವಣಗೆರೆ ವಿಶ್ವ ವಿದ್ಯಾಲಯದ ಅಡಿಯಲ್ಲಿ ಜಿ.ಆರ್.ಹಳ್ಳಿಯಲ್ಲಿನ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಶನಿವಾರ ಜಿಮ್‌ಖಾನ ಅಡಿಯಲ್ಲಿ ನಡೆದ ಜ್ಞಾನ ಗಂಗೋತ್ರಿ ಕ್ರೀಡಾಕೂಟ ಅಂತರ ವಿಭಾಗ ಕ್ರೀಡಾಕೂಟದಲ್ಲಿ ಭಾಗವಹಿಸಿ ಮಾತನಾಡಿದ ಅವರು ನಮ್ಮಲ್ಲಿ ಇತ್ತೀಚೆಗೆ ನಡೆದ ಒಲಂಪಿಕ್ ಕ್ರೀಡಾಕೂಟದಲ್ಲಿ ನಮ್ಮವರ ಸಾಧನೆ ಕಡಿಮೆಯಾಗಿದೆ ಇಂದು ಒಂದು ಕಡೆಯಾದರೆ ಮತ್ತೊಂದು ಕಡೆಯಲ್ಲಿ ನಮ್ಮವರಿಗೆ ಕ್ರೀಡೆಯಲ್ಲಿ ಸಿಗಬೇಕಾದ ಸೌಲಭ್ಯ ಸರಿಯಾದಚ ರೀತಿಯಲ್ಲಿ ಸಹಾಯ ಮತ್ತು ಸಹಕಾರ ಸಿಗುತ್ತಿಲ್ಲ, ನಮ್ಮವರು ಒಲಂಪಿಕ್ ನಲ್ಲಿ ಇಷ್ಟು ಪದಕಗಳನ್ನು ಗೆದ್ದಿರುವುದೇ ಒಮದು ದೊಡ್ಡವ ಸಾಧನೆಯಾಗಿದೆ ಎಂದರು.

ಇತ್ತೀಚಿನ ದಿನಮಾನದಲ್ಲಿ ಬಹುತೇಕ ಪೋಷಕರು ತಮ್ಮ ಮಕ್ಕಳು ಉತ್ತಮವಾದ ಅಂಕಗಳನ್ನು ಪಡೆದು ಇಂಜಿನಿಯರ್, ಡಾಕ್ಟರ್, ನ್ಯಾಯವಾದಿ, ಇಲ್ಲವೆ ಸರ್ಕಾರದಲ್ಲಿ ಉತ್ತಮವಾದ ಅಧಿಕಾರಿಯಾಗಲಿ ಎದು ಆಶಿಸುತ್ತಾ ಉತ್ತಮವಾದ ಸಂಬಳವನ್ನು ತರಲಿ ಎನ್ನುತ್ತಾರೆ ಆದರೆ ಯಾರೂ ಸಹಾ ಕ್ರೀಡಾಪಟುಗಳಾಲಿ ಎಂದು ಆಶಿಸುವುದಿಲ್ಲ ಇದು ನಮ್ಮ ದೇಶದ ದುರಂತವಾಗಿದೆ. ಸರ್ಕಾರದಿಂದ ಕ್ರೀಡೆಗೆ ಸರಿಯಾದ ರೀತಿಯಲ್ಲಿ ಪ್ರೋತ್ಸಾಹ ಸಿಗುತ್ತಿಲ್ಲ, ಇದರಿಂದ ಹಲವಾರು ಕ್ರೀಡಾಪಟುಗಳು ಉತ್ತಮವಾಧ ಪ್ರತಿಭೆಯನ್ನು ಹೊಂದಿದ್ದರು ಸಹಾ ಅದಕ್ಕೆ ಪ್ರೋತ್ಸಾಹ ಇಲ್ಲದೆ ಕಮರಿ ಹೋಗುತ್ತಿವೆ. ಎಂದು ಕುಮಾರ್ ವಿಷಾಧಿಸಿದರು. ಕ್ರೀಡಾ ಸಂಯೋಜಕರಾದ ಡಾ. ರಾಜೇಂದ್ರ ಪ್ರಸಾದ್ ಮಾತನಾಡಿ ಇತ್ತೀಚಿನ ದಿನಮಾನದಲ್ಲಿ ಯುವ ಜನತೆ ಕ್ರೀಡೆಯಲ್ಲಿ ಭಾಗವಹಿಸುವುದು ಕಡಿಮೆಯಾಗಿದೆ. ಬಹುತೇಕ ಯುವ ಜನಾಂಗ ಮೋಬೈಲ್‌ನಲ್ಲಿ ಮುಳುಗಿರುತ್ತಾರೆ ಇದರಿಂದ ಪ್ರಪಂಚವನ್ನೇ ಮರೆಯುತ್ತಾರೆ. ಕ್ರಿಡೆ ಮಾನವನಿಗೆ ಅತಿ ಮುಖ್ಯವಾಗಿದೆ ಇದರಿಂದ ಮಾನಸಿಕವಾಗಿ ಸದೃಢವಾಗಲು ಸಹಾಯವಾಗುತ್ತದೆ, ಆದರೆ ಇದರಬಗ್ಗೆ ಯಾರಿಗೂ ಸಹಾ ಅರಿವಿಲ್ಲದೆ ಕ್ರೀಡೆಯನ್ನು ನಿರ್ಲಕ್ಷ ಮಾಡುತ್ತಿದ್ದಾರೆ.

## ಮದಕರಿ ಮಹಾಗಣಪತಿ ದೇವಸ್ಥಾನದ ಆವರಣದಲ್ಲಿ ನವಗ್ರಹ ದೇವಸ್ಥಾನದ ಪ್ರತಿಷ್ಠಾಪನೆ

» ಚಿತ್ರದುರ್ಗ

ರಂಗಯ್ಯನಬಾಗಿಲು ಸಮೀಪವಿರುವ ಮದಕರಿ ಮಹಾ ಗಣಪತಿ ದೇವಸ್ಥಾನದ ಆವರಣದಲ್ಲಿ ನೂತನ ನವಗ್ರಹ ದೇವಸ್ಥಾನ ಪ್ರತಿಷ್ಠಾಪನೆ ಅಂಗವಾಗಿ ಮಹಾ ಗಣಪತಿಯನ್ನು ವಿಶೇಷವಾಗಿ ಅಲಂಕರಿಸಿ ಪೂಜಿಸಲಾಯಿತು.

ವಿವಿಧ ಬಗೆಯ ಹೂವು, ಹಾರ, ಹೊಂಬಾಳೆ, ಹಸಿರು ಪತ್ರೆಯಿಂದ ಸಿಂಗರಿಸಿ ಮಹಾಗಣಪತಿಗೆ ಬೆಳ್ಳಿ ಆಭರಣ ಹಾಗೂ ಕೀರಿಟ ಧರಿಸಿ ಸಿಂಗರಿಸಲಾಗಿತ್ತು.

ಮಹಾಸಂಕಲ್ಪ, ಪ್ರಾಣ ಪ್ರತಿಷ್ಠಾಪನೆ, ನೇತ್ರೋನ್ ಮಿಲನ ನಿರೀಕ್ಷಣೆ ಕಲಾ ಹೋಮ, ಕಳಸಾಭಿಷೇಕ, ಮಹಾ ಮಂಗಳಾರತಿ ನಂತರ ನೂರಾರು ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು.



## ಪ್ರಮುಖ ಸುದ್ದಿ

### ಗಂಜಿಗುಂಟೆ ಗ್ರಾಮದ ನಿವೇಶನ ರಹಿತ ಪ್ರತಿಭಟನೆಗೆ ಮಣಿದ ಜಿಲ್ಲಾಡಳಿತ

# ನಿವೇಶನಕ್ಕೆ 12ರಿಂದ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ

» ಚಳ್ಳಕೆರೆ

ನಗರದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಕಳೆದ ನಾಲ್ಕು ದಿನಗಳಿಂದ ನಿವೇಶನಕ್ಕಾಗಿ ಗಂಜಿಗುಂಟೆ ಗ್ರಾಮದ ನಿವೇಶನ ರಹಿತರು ನಡೆಸುತ್ತಿರುವ ಮುಷ್ಕರಕ್ಕೆ ಕೊನೆಗೂ ಜಿಲ್ಲಾಡಳಿತ ಮಣಿದಿದೆ.

ಶನಿವಾರ ಗಂಜಿಗುಂಟೆ ಗ್ರಾಮದ ಹರಿಜನ ಕುಟುಂಬದವರು ನಿವೇಶನ ನೀಡುವಂತೆ ಒತ್ತಾಯಿಸಿ ಪ್ರತಿಭಟನೆ ಆರಂಭಸಿದ ಬಗ್ಗೆ ಮಾಹಿತಿ ಪಡೆದ ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಜಿಲ್ಲಾಧಿಕಾರಿಗಳ ಮಾರ್ಗದರ್ಶನದಂತೆ ಶನಿವಾರ ತಹಶೀಲ್ದಾರ್ ಮತ್ತು ಇಒ ಹಾಗೂ ಅಧಿಕಾರಿಗಳೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಪ್ರಸ್ತುತ ಗ್ರಾಮದಲ್ಲಿರುವ ರಿ.ಸರ್ವೆ, ನಂ 105ರ ಸುಮಾರು ಐದು ಎಕರೆ ಭೂಮಿಯನ್ನು ತಾಲ್ಲೂಕು ಪಂಚಾಯಿತಿ



ಕಾರ್ಯನಿರ್ವಹಣಾಧಿಕಾರಿಗಳಿಗೆ ಸರ್ಕಾರ ಈಗಾಗಲೇ ಮಂಜೂರು ಮಾಡಿದೆ. ಅಲ್ಲಿನ ನಿವಾಸಿಗಳೊಂದಿಗೆ ಸಮಸ್ಯೆಯ ತೀರ್ವತೆಯ ಬಗ್ಗೆ ಚರ್ಚಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರಸ್ವಾಮಿ ಸದರಿ ಜಮೀನಿನಲ್ಲಿ ಕೆಲ ವ್ಯಕ್ತಿಗಳು ಕಳದ ಕೆಲ ವರ್ಷಗಳಿಂದ ಮನೆ ನಿರ್ಮಿಸಿಕೊಂಡಿದ್ದು, ಅದನ್ನು ಹೊರತುಪಡಿಸಿ ಉಳಿದ ಯಾರಾದರು ಒತ್ತುವರಿ ಮಾಡಿಕೊಂಡಿದ್ದಲ್ಲಿ ಕಾನೂನು ಕ್ರಮ ಕೈಗೊಂಡು ತೆರವು ಮಾಡಿಸಬೇಕು. ಆ.12ರಸೋಮವಾರದಿಂದಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಪಡೆದು ಪರಿಶೀಲನೆ ನಂತರ ಆರ್ಹರಿಗೆ ಮಾತ್ರ ನಿವೇಶನ ನೀಡುವಂತೆ ಸೂಚನೆ ನೀಡಿದರು.

ನೂರಾರು ಹರಿಜನ ಕುಟುಂಬಗಳು ಗಂಜಿಗುಂಟೆ ಗ್ರಾಮದ ರಿ.ಸರ್ವೆ,ನಂ 105ರ ಸರ್ಕಾರಿ ಗೋಮಾಳದ ಪ್ರದೇಶದಲ್ಲಿ ಕಳೆದ ಹಲವಾರು ವರ್ಷಗಳಿಂದ ವಾಸವಿದ್ದು, ಅಲ್ಲಿನ ಒತ್ತುವರಿಯನ್ನು ತೆರವುಗೊಳಿಸಿ ನಿವೇಶನ ರಹಿತರಿಗೆ ನಿವೇಶನ ನೀಡಬೇಕೆಂದು ಒತ್ತಾಯಿಸಿ ಕಳೆದ ನಾಲ್ಕು ದಿನಗಳಿಂದ ತಾಲ್ಲೂಕು ಕಚೇರಿ ಮುಂಭಾಗದಲ್ಲೇ ಅಡುಗೆ ಮಾಡಿಕೊಂಡು ಆಹೋರಾತ್ರಿ ಧರಣಿ ನಡೆಸುತ್ತಿದ್ದರು.

ತಹಶೀಲ್ದಾರ್‌ರೇಹಾನ್‌ಪಾಷ,ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶಶಿಧರ, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮಲೆಕ್ಕಿಗ ಕೇಶವಚಾರಿ, ಪಿಡಿಒ ಶಿವಣ್ಣ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಳ್ಳಕೆರೆ ಪೊಲೀಸರ ಕಾರ್ಯಚರಣೆ: ಅಂತರಾಜ್ಯ ಗಾಂಜಾ ಪೇಡ್ಲರ್ ಒಡಿಶಾದ ಬಾಜೂಜಿ ಸುಬುದಿ ಬಂಧನ

» ಮೊದಲ ಪುಟದಿಂದ

ಆರೋಪಿ ಎ.ಬಾಜೂಜಿಸುಬುದಿ ಗಾಂಜಾವನ್ನು ಚಳ್ಳಕೆರೆಯೂ ಸೇರಿದಂತೆ ರಾಜ್ಯ, ಅಂತರಾಜ್ಯದ ಅನೇಕ ಭಾಗಗಳಲ್ಲಿ ಮಾರಾಟ ಮಾಡಿ ಪೊಲೀಸರ ಕೈಗೆ ಸಿಗದಂತೆ ತಪ್ಪಿಸಿಕೊಳ್ಳುತ್ತಿದ್ದ. ಈ ಬಗ್ಗೆ ಮಾಹಿತಿ ಪಡೆದ ಪೊಲೀಸರು ಒಡಿಶಾ, ಆಂಧ್ರ ಪ್ರದೇಶ ಸೇರಿದಂತೆ ಎಲ್ಲೆಡೆ ಹುಡುಕಾಟ ನಡೆಸಿದ್ದು ಕೊನೆಗೂ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ. ಪೊಲೀಸ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

**ಇಸ್ಪೀಟ್ ಜೂಜಾಟ ಓರ್ವ, ಹಣ ವಶ** :ತಾಲ್ಲೂಕಿನ ಸೋಮಗುದ್ದು ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಮಂಜುನಾಥ(50) ಎಂಬುವವನ್ನು ಬಂಧಿಸಿ ಅವನಿಂದ ಜೂಜಾಟದ ಹಣ 6190 ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪಿಎಸ್ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಅಸಹಾಯಕರ ಮನೆ ಬಾಗಿಲಿಗೆ ಧರ್ಮಸ್ಥಳದಿಂದ 21,12,000 ರೂ. ಮಶಾಸನ ವಿತರಣೆ



» ಹೊಸದುರ್ಗ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿ ಹೊಸದುರ್ಗ ವತಿಯಿಂದ ತಾಲೂಕಿನ ಮತ್ತೋಡು ಹೋಬಳಿಯ ಕಾರೇಹಳ್ಳಿ ಗ್ರಾಮದ ದೇವಿರಮ್ಮ ರವರಿಗೆ ಧರ್ಮಸ್ಥಳದಿಂದ 1000 ರೂ ಮಾಶಾಸನ ವಿತರಣೆ ಮಾಡಲಾಯಿತು.ನಂತರ ಮಾತನಾಡಿದ ಯೋಜನಾಧಿಕಾರಿ ಶಿವಣ್ಣ ಅಸಾಹಯಕರು ಧೈರ್ಯ ಕಳೆದುಕೊಳ್ಳದೆ ಆತ್ಮಸ್ಥೈರ್ಯದಿಂದ ಬದುಕಬೇಕು. ಅಸಹಾಯಕರು ಜೀವಂತ ಇರುವರೆಗೂ ಧರ್ಮಸ್ಥಳ ಸಂಸ್ಥೆ ಸಹಾಯಕ್ಕೆ ಬರುತ್ತದೆ ಎಂದು ತಿಳಿಸಿದರು. ತಾಲ್ಲೂಕಿನಲ್ಲಿ ಒಟ್ಟು 176 ಅಸಹಾಯಕರಿಗೆ ಪ್ರತಿ ತಿಂಗಳು ತಲಾ 1000 ರೂ ರಂತೆ ಒಟ್ಟು. ವಾರ್ಷಿಕ 21,12,000 ಇಷ್ಟು ಮೊತ್ತವನ್ನು ಅಸಹಾಯಕರಿಗೆ ಕಾರ್ಯಕರ್ತರ ಮೂಲಕ ಮನೆ ಬಾಗಿಲಿಗೆ ಪ್ರತಿ ತಿಂಗಳು ನೀಡಲಾಗಿತ್ತಿದೆ.ಅಲ್ಲದೇ ಪೌಷ್ಠಿಕ ಆಹಾರದ ಕಿಟ್ಟನ್ನು ಧರ್ಮಸ್ಥಳದಿಂದ ಪ್ರತಿ ತಿಂಗಳು ಅಸಹಾಯಕರಿಗೆ ನೀಡುತ್ತಿದ್ದು ಅವರಿಗೆ ಯಾರಿಲ್ಲ ಎಂಬ ಕೊರಗು ಬರದ ಹಾಗೇ ಧರ್ಮಸ್ಥಳ ಸಂಸ್ಥೆ ನೋಡಿಕೊಳ್ಳುತ್ತಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಕಾರೇಹಳ್ಳಿ ವಲಯದ ಮೇಲ್ವಿಚಾರಕಿ ಶಿಲ್ಪಶ್ರೀ, ಸೇವಾಪ್ರತಿನಿಧಿ ಲತಾ ಉಪಸ್ಥಿತಿದರು.

### ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ನೊಳಂಭ ಲಿಂಗಾಯತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

» ಹೊಸದುರ್ಗ

ಸಿದ್ದರಾಮೇಶ್ವರ ವಿದ್ಯಾಸಂಸ್ಥೆ ಸಿದ್ದರಾಮ ನಗರ ಹೊಸದುರ್ಗ ಇವರ ವತಿಯಿಂದ 2023-24 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕಗಳಿಸಿದ ಪ್ರತಿಭಾನ್ವಿತ ನೊಳಂಭ ಲಿಂಗಾಯತ ವಿದ್ಯಾರ್ಥಿಗಳಿಗೆ ಸೆ,10 ರಂದು ಚಿತ್ರದುರ್ಗ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನ ಆಯೋಜಿಸಲಾಗಿದೆ ಎಂದು ವಿದ್ಯಾಸಂಸ್ಥೆಯ ಅಧ್ಯಕ್ಷ ಮರಿದಿಮ್ಮಪ್ಪ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಆರ್ಹ ವಿದ್ಯಾರ್ಥಿಗಳು ಅಂಕಪಟ್ಟಿ, ಅದಾರಕಾರ್ಡ್, 2 ಪಾಸ್ ಪೋಟೋಗಳೊಂದಿಗೆ ಆಗಸ್ಟ್ 25 ರೊಳಗೆ ವ್ಯವಸ್ಥಾಪಕರು ಸಿದ್ದರಾಮೇಶ್ವರ ವಿದ್ಯಾಸಂಸ್ಥೆ ಸಿದ್ದರಾಮನಗರ ಇಲ್ಲಿಗೆ ಅರ್ಜಿಯನ್ನು ಅರ್ಜಿಯನ್ನ ತಲುಪಿಸಬಹುದು ಹೆಚ್ಚಿನ ಮಾಹಿತಿಗಾಗಿ ವಿರೇಂದ್ರಪಾಟೀಲ್ ಮೋ:9448944655 ವಿ.ಆರ್.ಪ್ರಕಾಶ್ ಮೋ: 9731291964 ಇವರನ್ನು ಸಂಪರ್ಕಿಸಿ, ಸಂಪರ್ಕಿಸಬಹುದು.

# ರೈತರ ಸಮಸ್ಯೆಗೆ ಪ್ರಾಮಾಣಿಕ ಹೋರಾಟ ಮಾಡಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ಜಿಲ್ಲಾಧ್ಯಕ್ಷರಾಗಿ ನೇಮಕಗೊಂಡಿರುವ ಧನಂಜಯ ಹಂಪಯ್ಯನಮಾಳಿಗೆ ಇವರಿಗೆ ಪ್ರವಾಸಿ ಮಂದಿರದಲ್ಲಿ ಉಪ್ಪಾರ ಸಮಾಜ ಹಾಗೂ ಅಭಿಮಾನಿಗಳು ಸೇರಿ ಸನ್ಮಾನಿಸಿದರು.

ಜಿಲ್ಲಾ ಉಪ್ಪಾರ ಸಮಾಜದ ಮಾಜಿ ಅಧ್ಯಕ್ಷ ಆರ್.ಮೂರ್ತಿ ಮಾತನಾಡಿ ಕರ್ನಾಟಕ ರಾಜ್ಯ ರೈತ ಸಂಘದವರು ನಂಬಿಕೆಯಿಟ್ಟು ಧನಂಜಯ ಹಂಪಯ್ಯನಮಾಳಿಗೆ ಇವರಿಗೆ ಜಿಲ್ಲಾಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿದ್ದಾರೆ. ಹೆಗಲ ಮೇಲೆ ಈಗ ಹೆಚ್ಚಿನ ಭಾರವಿರುವುದರಿಂದ ಜಿಲ್ಲೆಯ ರೈತರ ಸಮಸ್ಯೆ, ಕುಂದುಕೊರತೆಗಳ ನಿವಾರಣೆಗೆ ಪ್ರಾಮಾಣಿಕವಾಗಿ ಹೋರಾಟ ಮಾಡಬೇಕೆಂದು ಹಾರೈಸಿದರು.

ರಾಜ್ಯ ಉಪ್ಪಾರ ಸಂಘದ ವಕ್ತಾರ ಎಂ.ಪಿ.ಶಂಕರ್ ಮಾತನಾಡುತ್ತ ಹಸಿರು ಶಾಲಿಗೆ ತನ್ನದೆ ಆದ ಶಕ್ತಿಯಿದೆ. ದೇಶಕ್ಕೆ ಅನ್ನ ನೀಡುವ ರೈತ ನಾನಾ ರೀತಿಯ ಸಮಸ್ಯೆ ಸವಾಲುಗಳನ್ನು ಎದುರಿಸುತ್ತಿದ್ದಾನೆ. ಆಳುವ ಸರ್ಕಾರಗಳು ರೈತ ವಿರೋಧಿ ನೀತಿ ಅನುಸರಿಸಿದಾಗಎದೆಗುಂದದೆಹೋರಾಟಕ್ಕೆ ಇಳಿಯಬೇಕು ಎಂದು ಧನಂಜಯ ಹಂಪಯ್ಯನಮಾಳಿಗೆಗೆ ತಿಳಿಸಿದರು.ಬಳ್ಳಾರಿ ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷ ಯರ್ರಿಸ್ವಾಮಿ ಮಾತನಾಡಿ ಕಾರ್ಯಕ್ಷಮತೆ, ಬದ್ದತೆ ಗುರುತಿಸಿ ಕರ್ನಾಟಕ ರಾಜ್ಯ ರೈತ ಸಂಘ ಧನಂಜಯ ಹಂಪಯ್ಯನಮಾಳಿಗೆ



ಇವರನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದೆ. ಅನ್ನದಾತ ರೈತನ ಬೆಳೆಗೆ ಇದುವರೆವಿಗೂ ಯಾವ ಸರ್ಕಾರವೂ ವೈಜ್ಞಾನಿಕ ಬೆಲೆ ನೀಡಿಲ್ಲ. ಸಾಲ ತೀರಿಸಲು ಆಗದೆ ರೈತ ಆತ್ಮಹತ್ಯೆಯ ಹಾದಿ ಹಿಡಿಯುತ್ತಿದ್ದಾನೆ. ಬ್ಯಾಂಕ್‌ಗಳು ರೈತರನ್ನು ಸಾಲಕ್ಕೆ ಪೀಡಿಸುತ್ತಿವೆ. ಇಂತಹ ಕಷ್ಟದ ಪರಿಸ್ಥಿತಿಯಲ್ಲಿ ಸರ್ಕಾರ ರೈತರ ನೆರವಿಗೆ ಧಾವಿಸಬೇಕೆಂದು ಒತ್ತಾಯಿಸಿದರು.

ಉಪ್ಪಾರ ಸಮಾಜದ ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷ ಸಿದ್ದೇಶ್ವರ ಮಾತನಾಡುತ್ತ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾಗಿ ನೇಮಕವಾಗಿರುವ ಧನಂಜಯ ಹಂಪಯ್ಯನ ಮಾಳಿಗೆ ಜಿಲ್ಲೆಯ ರೈತರ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಸರ್ಕಾರದಿಂದಸಿಗಬೇಕಾದಸೌಲತ್ತುಗಳನ್ನು ಕೊಡಿಸುವತ್ತ ಗಮನ ಹರಿಸಬೇಕು. ಸಕಾಲಕ್ಕೆ ಮಳೆಯಿಲ್ಲದೆ ರೈತರು ಅನೇಕ ತೊಂದರೆಗಳನ್ನು ಅನುಭವಿಸುತ್ತಿದ್ದಾರೆ. ಬಿತ್ತನೆ ಬೀಜ, ರಸಗೊಬ್ಬರ ಸೇರಿದಂತೆ ಕೃಷಿ ಪರಿಕರಗಳು ಸುಲಭವಾಗಿ ಕೈಗೆ ಸಿಗುವಂತಾಗಬೇಕೆಂದುಹೇಳಿದರು.ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡಿ ಬುದ್ದ, ಬಸವ, ಅಂಬೇಡ್ಕರ್ ಇವರುಗಳು ಸಮಾನತೆಗಾಗಿ ಹೋರಾಡಿದವರು. ಜಾತಿ ಧರ್ಮದ ತಾರತಮ್ಯವಿರಲಿಲ್ಲ. ಸಣ್ಣ ಸಣ್ಣ ರೈತರು ಅಧಿಕಾರದ ಚುಕ್ಕಾಣಿ ಹಿಡಿಯುವಂತಾಗಬೇಕು. ಆಗ ಮಾತ್ರ ಸಮಾಜಮುಖಿಯಾಗಿ ಕೆಲಸ ಮಾಡಲು ಸಾಧ್ಯ. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ರೈತ ಸಂಘವನ್ನು ಬಲಪಡಿಸುವತ್ತ ಗಮನ ಕೊಡಬೇಕೆಂದು ಧನಂಜಯ ಹಂಪಯ್ಯನಮಾಳಿಗೆ ಇವರಿಗೆ ಸಲಹೆ ನೀಡಿದರು.ಕರ್ನಾಟಕ ಜನಶಕ್ತಿಯ ಟಿ.ಶಫಿವುಲ್ಲಾ ಮಾತನಾಡುತ್ತ ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗ ಜಿಲ್ಲೆಯಲ್ಲಿ ರೈತರು ನಾನಾ ರೀತಿ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಸಮಸ್ಯೆಗಳ ನಿವಾರಣೆಗೆ ಸದಾ ಹೋರಾಟವಿರಬೇಕೆಂದು ತಿಳಿಸಿದರು. ದಲಿತ ಮುಖಂಡ ಬಿ.ರಾಜಪ್ಪ ಮಾತನಾಡಿ ರೈತ ಸಂಘದ ಜಿಲ್ಲಾಧ್ಯಕ್ಷ ಸ್ಥಾನವೆಂದರೆ ಹೂವಿನ ಹಾಸಿಗೆಯಲ್ಲಿ ಮುಳ್ಳಿನ ಹಾಸಿಗೆಯಿದ್ದಂತೆ. ಸಂಘದಲ್ಲಿನ ಲೋಪದೋಷ ತಪ್ಪುಗಳನ್ನು ಸರಿಪಡಿಸಿಕೊಂಡು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋದಾಗ ಸಂಘಟನೆ ಗಟ್ಟಿಯಾಗುತ್ತದೆ ಎಂದರು.

ಉಪನ್ಯಾಸಕ ಬಸವರಾಜ್ ಬೆಳಗಟ್ಟ ಮಾತನಾಡುತ್ತ ರೈತ ಸಂಘ ಹೇಗೆ ಕಾರ್ಯೋನ್ಮುಖವಾಗಿದೆ ಎನ್ನವುದನ್ನು ತಿಳಿದುಕೊಳ್ಳುವುದು ಮುಖ್ಯ. ದುರ್ಬಲರ ಮೇಲೆ ಅಧಿಕಾರಿಗಳ ದಬ್ಬಾಳಿಕೆ ನಡೆಯುತ್ತಿರುವುದನ್ನು ಹತ್ತಿಕ್ಕುವ ಕೆಲಸವಾಗಬೇಕು. ಎಲ್ಲರಿಗೂ ಸಾಮಾಜಿಕ ನ್ಯಾಯ ಕೊಡಬೇಕಾಗಿರುವುದರಿಂದ ಸಂವಿಧಾನ ಓದಿಕೊಳ್ಳಬೇಕೆಂದು ಧನಂಜಯ ಹಂಪಯ್ಯನ ಮಾಳಿಗೆಗೆ ತಿಳಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಧನಂಜಯ ಹಂಪಯ್ಯನಮಾಳಿಗೆ ಹೆಗಲಿಗೆ ಹಸಿರು ಶಾಲು ಹಾಕಿಕೊಂಡು 24 ವರ್ಷವಾಯಿತು. ಈಗ ಜವಾಬ್ದಾರಿ ಜಾಸ್ತಿಯಾಗಿದೆ. ಜಿಲ್ಲೆಯಲ್ಲಿ ರೈತರಿಗೆ ವಿದ್ಯುತ್ ಸಮಸ್ಯೆಯಿದ್ದಾಗ ನಾನು ಹೋರಾಟಕ್ಕಿಳಿದವನು. ಇಲ್ಲಿಯತನಕ ನೂರಾರು ಹೋರಾಟಗಳನ್ನು ಮಾಡಿದ್ದೇನೆ. ಚುನಾವಣೆಯಲ್ಲಿ ಹೆಂಡ ಖಂಡಕ್ಕೆ ಬಲಿಯಾಗಿ ಅಮೂಲ್ಯವಾದ ಮತಗಳನ್ನು ಮಾರಿಕೊಳ್ಳಬೇಡಿ. ರೈತರ ಕಷ್ಟ-ಸುಖಗಳನ್ನು ಆಲಿಸುವಂತ ಯೋಗ್ಯರಿಗೆ ಮತ ನೀಡಿ ಆಯ್ಕೆ ಮಾಡಿ ಎಂದು ಮನವಿ ಮಾಡಿದರು.

ಇಲ್ಲಿಯತನಕ ಯಾವುದೆ ಕಪ್ಪುಚುಕ್ಕೆಯಿಲ್ಲದೆ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಇನ್ನು ಮುಂದೆಯೂ ಸದಾ ರೈತರ ಪರವಾಗಿರುತ್ತೇನೆಂದು ಭರವಸೆ ನೀಡಿದರು.ಗುರುಮೂರ್ತಿ, ದಾಳಿಂಬೆ ಈಶ್ವರಪ್ಪ, ಗಂಗಣ್ಣ, ನಿವೃತ್ತ ಉಪನ್ಯಾಸಕ ನಾಗರಾಜ್, ರಮೇಶ್, ಕೆಂಚವೀರಪ್ಪ, ಬಸಣ್ಣ, ಗುರಣ್ಣ, ತಿಪ್ಪೇಸ್ವಾಮಿ ಬೆಳಗಟ್ಟ, ಗೋವಿಂದಸ್ವಾಮಿ ಇನ್ನು ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ರೋಗ ನಿರೋಧಕ ಶಕ್ತಿಗೆ ತಾಯಿ ಹಾಲು ಮುಖ್ಯ

» ಚಿತ್ರದುರ್ಗ

ಮಗುವಿಗೆ ಬೇಕಾದ ದೈಹಿಕ ಆರೋಗ್ಯ ಮತ್ತು ರೋಗ ನಿರೋಧಕ ಶಕ್ತಿಯನ್ನು ಪಡೆಯುವಲ್ಲಿ ತಾಯಿಯ ಹಾಲು ಬಲುಮುಖ್ಯ ಪಾತ್ರವನ್ನು ವಹಿಸುತ್ತದೆ ಎಂದು ಎಸ್ ಜೆ ಎಂ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಟಿಎಸ್ ನಾಗರಾಜ್ ತಿಳಿಸಿದ್ದಾರೆ.

ಎಸ್ ಜೆ ಎಂ ಫಾರ್ಮಸಿ ಕಾಲೇಜು ವತಿಯಿಂದ "ವಿಶ್ವ ಸ್ತನ್ಯಪಾನ ಸಪ್ತಾಹ-2024" ಅಂಗವಾಗಿ ನಗರದ ತಮಟಗಲ್ಲು ಅಂಗನವಾಡಿ ಕೇಂದ್ರದಲ್ಲಿ ನಿನ್ನೆ ಸಂಜೆ ಹಾಗೂ ಫಾರ್ಮಸಿ ಕಾಲೇಜಿನಲ್ಲಿ ಇಂದುಹಮ್ಮಿಕೊಂಡಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಯಿಯ ಹಾಲು ಅಮೃತಕ್ಕೆ ಸಮಾನ ಈ ದಿನಗಳಲ್ಲಿ ಭೂಮಿಯ ಮೇಲೆ ಎಲ್ಲವೂ ಕಲುಷಿತವಾಗಿದೆ ಅದರಿಂದ ನಾನು ರೋಗಗಳು ಹರಡುತ್ತಿವೆ. ಏಕೆಂದರೆ ಮಗುವಿಗೆ ಬೇಕಾದ ದೈಹಿಕ ಆರೋಗ್ಯ ಮತ್ತು ರೋಗ ನಿರೋಧಕ ಶಕ್ತಿಯನ್ನು ಪಡೆಯುವಲ್ಲಿ ತಾಯಿಯ ಹಾಲು ಬಲುಮುಖ್ಯ ಪಾತ್ರವನ್ನು ವಹಿಸುತ್ತದೆ. ತಾಯಿ ಹಾಲು ಕುಡಿಯದ ಮಕ್ಕಳು ಬಹಳ ಬೇಗ ಅನಾರೋಗ್ಯಕ್ಕೆ ತುತ್ತಾಗುತ್ತಾರೆ. ಈ ವಿಚಾರ ತಾಯಂದರಿಗೆ ಮನಮುಟ್ಟುವಂತೆ ತಿಳಿಯಪಡಿಸಿದರು.

ಔಷಧ ಉಪಚಾರ ವಿಭಾಗದ ಮುಖ್ಯಸ್ಥರಾದ ಡಾ ಯೋಗಾನಂದ ಆರ್ ಮಾತನಾಡಿ ಯಾಂತ್ರಿಕ ಬದುಕು ಹಾಗೂ ಯುವ ಪೀಳಿಗೆ ಎದೆ ಹಾಲು ಉಣಿಸುವಲ್ಲಿ ಹಿಂದೆ ಉಳಿಯುತ್ತಿದ್ದಾರೆ ಅದರಿಂದ ಮಗುವಿನ ಆರೋಗ್ಯಕ್ಕೆ ತುಂಬಾ ಗಂಭೀರವಾದ ಪರಿಣಾಮ ಬೀರುತ್ತದೆ. ತಾಯಿ ಹಾಲು ಸಿಕ್ಕ ಮಗುವೆ ಭಾಗ್ಯ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕುಮಾರಿ ಪೂಜಾ ಬಿಸಿ ತಾಯಿ ಹಾಲು ಮಹತ್ವವನ್ನು ತಿಳಿಸಿದಳು. ಪ್ರಶಾಂತ್ ಜಿಆರ್ ಹಳ್ಳಿ ತಮಟೆಗಲ್ಲು ಇಂತಹ ವಿಶೇಷ ಕಾರ್ಯಕ್ರಮವನ್ನು ಕೊಂಡಾಡಿದರು.

ಇದೇ ಕಾರ್ಯಕ್ರಮದ ಅಂಗವಾಗಿ ಫಾರ್ಮಡಿ ವಿದ್ಯಾರ್ಥಿಗಳಿಗೆ ಎಸ್ ಜೆ ಎಂ ಫಾರ್ಮಸಿ ಕಾಲೇಜಿನಲ್ಲಿ ಬಸವೇಶ್ವರ ಮೆಡಿಕಲ್ ಕಾಲೇಜಿನ ಓಬಿಜಿ ವಿಭಾಗದ ಮುಖ್ಯಸ್ಥರಾದ ಡಾ ಲತಾ ವಿ ವಿದ್ಯಾರ್ಥಿಗಳಿಗೆ ತಾಯಿ ಎದೆ ಹಾಲಿನ




ಮಹತ್ವದ ಬಗ್ಗೆ ಮಾತನಾಡಿ, ತಾಯಿಯ ಎದೆ ಹಾಲಿನ ಪ್ರಕಾರಗಳು ಅದರ ಬೇರೆ ಹಾಲಿನ ಜೊತೆ ವ್ಯತ್ಯಾಸ ತಿಳಿಸಿದರು. ಹಾಲನ್ನು ಮಗುವಿಗೆ ಕುಡಿಸುವ ಸರಿಯಾದ ವಿಧಾನ, ತಪ್ಪಿದಲ್ಲಿ ಅದರಿಂದ ಆಗುವ ತೊಂದರೆಗಳು. ತಾಯಿ ಹಾಲುಣಿಸುವ ಕೋಣೆಯಲ್ಲಿ ಯಾರು ಇರಕೂಡದು ಮತ್ತು ತಾಯಿಯೂ ಸಹ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು.

ಹಾಲು ಕುಡಿಸಿದ ನಂತರ ಮಗುವನ್ನು ತೇಗು ಬರುವತನಕ ಮಗುವನ್ನು ಬುಜದ ಮೇಲೆ ಎತ್ತಿಕೊಂಡು ನಂತರ ಮಲಗಿಸಬೇಕು ಇಲ್ಲದಿದ್ದರೆ ಕೆಲವೊಂದು ಸಲ ಕುಡಿದ ಹಾಲು ವಾಂತಿಯಾಗುತ್ತದೆ ಅಥವಾ ಶ್ವಾಸಕೋಶಕ್ಕೆ ಹೋಗಿ ಮಗುವಿಗೆ ತುಂಬಾ ತೊಂದರೆ ಆಗುವ ವಿಚಾರವನ್ನು ತಿಳಿಸಿದರು.

ಕೆಲಸಕ್ಕೆ ಹೋಗುವ ಮಹಿಳೆಯರು ಹಾಲುಣಿಸುವುದು ತುಂಬಾ ಕಷ್ಟಕರವಾಗುತ್ತದೆ ಅದರಿಂದ ಉಂಟಾಗುವ ಮಾನಸಿಕ ಒತ್ತಡ ಅವರ ದೇಹದ ಆರೋಗ್ಯದ ಮೇಲೆ ಆಗುವ ಅಪಾಯಗಳು ಹೆಚ್ಚು ಸ್ತನ ಕ್ಯಾನ್ಸರ್ ಬರುವ ಸಾಧ್ಯತೆಗಳು ಉಂಟು ಎಂದು ತಿಳಿಸಿದರು. ತಾಯಿ ಎದೆಹಲು ಉಣಿಸುವುದರಿಂದ ತಾಯಿಯ ಆರೋಗ್ಯ ಸುಧಾರಿಸುತ್ತದೆ ಪ್ರೋಲ್ಯಾಕ್ಟಿನ್ ಮತ್ತು ಆಕ್ಸಿಟೋಸಿನ್ ಹರ್ಮೋನುಗಳ ಲಾಭವನ್ನು ಪಡೆಯುತ್ತಾಳೆ. ಹಾರ್ಮೋನುಗಳು ಹಾಲು ಉಳಿಸದ ತಾಯಿಯಲ್ಲಿ ಬಿಡುಗಡೆ ಆಗುವುದಿಲ್ಲ. ಈ ವರ್ಷ ತಾಯಿ ಹಾಲಿನ ಮಹತ್ವದ ಕುರಿತಾದ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ಸುಷ್ಮಾ ಹಾಗೂ ಅನುಷಾ ನಡೆಸಿಕೊಟ್ಟರು ಶಮಂತಕಮಣಿ ಸ್ವಾಗತಿಸಿದರು, ಪೂಜಾ ಬಿ.ಸಿ. ವಂದಿಸಿದರು, ಕಾರ್ಯಕ್ರಮದ ಲಾಭವನ್ನು ತಮಟೆಗಲ್ಲು ನಿವಾಸಿಗಳು, ತಾಯಂದಿರು, ಗರ್ಭಿಣಿಯರು ಪಡೆದರು ಹಾಗೂ ಕಾರ್ಯಕ್ರಮದಲ್ಲಿ ಡಾ ವಿಜಯಕುಮಾರ್ ಎಂ ಎಂ ಜೆ ಡಾ ಬಸವರಾಜ್ ಎಚ್‌ಎಸ್ ಡಾ ಸ್ನೇಹಲತಾ. ಡಾ ಸೌಮ್ಯ ಹಾಗೂ ಫಾರ್ಮ ಡಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ತಮಟಗಲ್ಲು ಗ್ರಾಮದ ಪ್ರಶಾಂತ್ ಎಚ್‌ಐಒ. ಶಬಾನಬಾನು ಸಿಎಚ್‌ಒ ಮತ್ತು ಶ್ರೀಮತಿ ರುದ್ರಮ್ಮ ಅಧ್ಯಕ್ಷರು ಗ್ರಾಮ ಪಂಚಾಯಿತಿ ತಮಟಗಲ್ಲು ಸಣ್ಣ ಹನುಮಂತಪ್ಪ ಸದಸ್ಯರು ಗ್ರಾಮ ಪಂಚಾಯಿತಿ. ಬಿಟಿ ಸಾಕಮ್ಮ ದೊಡ್ಡ ಕರಬಸಪ್ಪ ಕೆಂಚಣ್ಣ ಮುಖಂಡರು ತಮಟಗಲ್ಲು ಗ್ರಾಮ ಶಬನ ಬಾನು ಕಮ್ಯುನಿಟಿ ಹೆಲ್ತ್ ಆಫೀಸರ್ . ಆಶಾ ಕಾರ್ಯಕರ್ತರಾದ ಶಿವಮಾಲಾ ಮತ್ತು ಗೀತಾ ಉದ್ಘಾಟನೆಯನ್ನು ನೆರವೇರಿಸಿದರು.

# ಪಿ.ಯು. ಕಾಲೇಜು ಉಪನ್ಯಾಸಕರಿಗೆ ಶಿಬಿರ



» ಚಿತ್ರದುರ್ಗ

ಪಠ್ಯೇತರ ಚಟುವಟಿಕೆಗಳಿಂದ ವಿದ್ಯಾರ್ಥಿಗಳಲ್ಲಿ ದೇಶಾಭಿಮಾನ ಮೂಡುವುದಲ್ಲದೆ ಮಾನಸಿಕವಾಗಿ ಸದೃಢವಾಗಲಿದ್ದಾರೆಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ತಿಳಿಸಿದರು.ಜಿಲ್ಲಾ ಸ್ಕೌಟ್ ಅಂಡ್ ಗೈಡ್ಸ್ ಸಂಸ್ಥೆಯಲ್ಲಿ ಪಿ.ಯು.ಕಾಲೇಜು ಉಪನ್ಯಾಸಕರಿಗೆ ನಡೆದ ಮಾಹಿತಿ ಶಿಬಿರ ಉದ್ಘಾಟಿಸಿ ಮಾತನಾಡಿದರು. ಜೀವನದಲ್ಲಿ ಶಿಸ್ತು, ಶಾಂತಿ ಮೈಗೂಡಿಸಿಕೊಳ್ಳಬೇಕಾದರೆ ಸ್ಕೌಟ್ ಅಂಡ್ ಗೈಡ್ಸ್ ಶಿಕ್ಷಣ ಸಹಕಾರಿಯಾಗಲಿದೆ. ಜಿಲ್ಲೆಯ ಪ್ರತಿ ಪಿ.ಯು.ಕಾಲೇಜಿನಲ್ಲಿ ರೋವರ್ ಅಂಡ್ ರೇಂಜರ್ ಘಟಕ ತೆರೆಯಲು ಸಹಕಾರ ನೀಡುತ್ತೇನೆ. ಚಿತ್ರದುರ್ಗವನ್ನು ಒಂದು ಮಾದರಿ ಜಿಲ್ಲೆಯಾಗಿಸುವಲ್ಲಿ ಎಲ್ಲರೂ ಸೇರಿ ಪಣ ತೊಡೋಣ ಎಂದರು.

ಹಿರಿಯ ಪತ್ರಕರ್ತ ಜಿ.ಎಸ್.ಉಜ್ಜಿನಪ್ಪ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡುತ್ತ ಹಿಂದುಳಿದ ಜಿಲ್ಲೆ ಚಿತ್ರದುರ್ಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೋವರ್ ಮತ್ತು ರೇಂಜರ್ ಘಟಕಗಳು ಆರಂಭವಾಗಬೇಕು. ಯುವ ಜನಾಂಗದಲ್ಲಿ ಸಂಸ್ಕೃತಿ, ಸಂಸ್ಕಾರ, ಗುರು-ಹಿರಿಯರನ್ನು ಗೌರವಿಸುವ ಗುಣ ಬೆಳೆಸಬೇಕಿದೆ ಎಂದು ಹೇಳಿದರು.

ಸ್ಕೌಟ್ ಅಂಡ್ ಗೈಡ್ಸ್ ಜಿಲ್ಲಾ ಸಂಸ್ಥೆ ಉಪಾಧ್ಯಕ್ಷ ಪರಮೇಶ್ ಮಾತನಾಡಿ ಕಾಲೇಜು ವಿದ್ಯಾರ್ಥಿಗಳಿಗೆ ರೋವರ್ ಮತ್ತು ರೇಂಜರ್ ಘಟಕಗಳನ್ನು ಕಡ್ಡಾಯವಾಗಿ ತೆರೆಯಬೇಕು. ಇತ್ತೀಚಿನ ದಿನಗಳಲ್ಲಿ ಯುವ ಜನಾಂಗ ಮೊಬೈಲ್ ಗೀಳಿಗೆ ಸಿಲುಕಿದ್ದು, ದೇಶಾಭಿಮಾನ, ಶಾಂತಿ, ಶಿಸ್ತು ಮರೆಯುತ್ತಿದ್ದಾರೆ. ಉಪನ್ಯಾಸಕರು ವಿದ್ಯಾರ್ಥಿಗಳನ್ನು ಸರಿದಾರಿಗೆ ತರುವ ಪ್ರಯತ್ನ ಮಾಡಬೇಕೆಂದು ಸಲಹೆ ನೀಡಿದರು.

ಸ್ಕೌಟ್ ಅಂಡ್ ಗೈಡ್ಸ್ ಜಿಲ್ಲಾ ಸಂಸ್ಥೆಯ ಮುಖ್ಯ ಆಯುಕ್ತ ಕೆ.ರವಿಶಂಕರ್‌ರೆಡ್ಡಿ ಶಿಬಿರದ ಅಧ್ಯಕ್ಷತೆ ವಹಿಸಿದ್ದರು.

ಜಿಲ್ಲಾ ಗೈಡ್ಸ್ ಆಯುಕ್ತರಾದ ಶ್ರೀಮತಿ ಸವಿತಾ ಶಿವಕುಮಾರ್, ಸಹ ಕಾರ್ಯದರ್ಶಿ ಡಾ.ರಹಮತ್‌ವುಲ್ಲಾ, ಜಿಲ್ಲಾ ಸಂಘಟಕರಾದ ಕೆ.ಟಿ.ಮಲ್ಲೇಶಪ್ಪ, ಸಿ.ರವಿ, ಜಿಲ್ಲಾ ಸ್ಥಾನಿಕ ಆಯುಕ್ತ ಅನಂತರೆಡ್ಡಿ ಹೆಚ್.ಟಿ.ತಿಪ್ಪೇಸ್ವಾಮಿ ಇವರುಗಳು ಹಾಜರಿದ್ದರು.ಶಿಬಿರದ ನಾಯಕತ್ವವನ್ನು ನರೇಂದ್ರಕುಮಾರ್ ವಹಿಸಿದ್ದರು.

**ಪ್ರಮುಖ ಸುದ್ದಿ**

# ಒಳ ಮೀಸಲಾತಿ ಸಂವಿಧಾನಬದ್ದ ಹೋರಾಟವಾಗಬೇಕು

» ಚಿತ್ರದುರ್ಗ

ಒಳ ಮೀಸಲಾತಿ ನ್ಯಾಯಬದ್ದ, ಸಂವಿಧಾನಬದ್ದ ಹೋರಾಟವಾಗಬೇಕೆ ವಿನಃ ಯಾರ ಹಕ್ಕನ್ನು ಕಿತ್ತುಕೊಳ್ಳಬಾರದೆಂಬುದು ಪಾರ್ಥಸಾರಥಿಯ ಆಶಯವಾಗಿತ್ತೆಂದು ಎಂ.ಆರ್.ಹೆಚ್.ಎಸ್.ರಾಜ್ಯಕಾರ್ಯದರ್ಶಿ ರಾಯಚೂರಿನ ಅಂಬಣ್ಣ ಅರೋಲಿಕರ್ ಸ್ಮರಿಸಿದರು.

ಪಾರ್ಥಸಾರಥಿ ಗೆಳೆಯರ ಬಳಗ-ಕರ್ನಾಟಕ ರೋಟರಿ ಬಾಲಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ನಾನು ಕಂಡಂತೆ ಪಾರ್ಥಸಾರಥಿ ನೆನಪಿನ ಕಾರ್ಯಕ್ರಮವನ್ನು ಕ್ರಾಂತಿಗೀತೆ ಮೂಲಕ ಉದ್ಘಾಟಿಸಿ ಮಾತನಾಡಿದರು.

ದಲಿತರಲ್ಲಿ ಒಳ ಮೀಸಲಾತಿ ಕುರಿತು ಜಾಗೃತಿ ಮೂಡಿಸಿದ ಪಾರ್ಥಸಾರಥಿ ಪಕ್ಷ ಬೇಧ ಮರೆತು ಎಲ್ಲರೊಂದಿಗೂ ಸಂಪರ್ಕವಿಟ್ಟುಕೊಂಡು ನಾಡಿನಾದ್ಯಂತ ಸುತ್ತಾಡಿ ಹೋರಾಟಕ್ಕೆ ಚುರುಕು ನೀಡಿದರು. ಹಿರಿಯ ಐ.ಎ.ಎಸ್.ಅಧಿಕಾರಿಗಳ ಜೊತೆ ಒಳ ಮೀಸಲಾತಿ ವಿಚಾರವಾಗಿ ಚರ್ಚಿಸುತ್ತಿದ್ದರು. ಒಳ ಮೀಸಲಾತಿಯನ್ನು ಪಡೆದೆ ಪಡೆಯುತ್ತೇವೆಂಬ ಗಟ್ಟಿ ನಿರ್ಧಾರ ಅವರದಾಗಿತ್ತು. ದಲಿತರು ಅನುಭವಿಸುತ್ತಿರುವ ಅನ್ಯಾಯವನ್ನು



ಎಲ್ಲಿ ಬೇಕಾದರೂ ವಿವರಿಸಿ ಮನವರಿಕೆ ಮಾಡಿಕೊಡುವ ತಾಕತ್ತು ಅವರಲ್ಲಿತ್ತು. ಹೋರಾಟ, ಕಾಲ್ನಡಿಗೆ, ಜಾಥ, ಪಾದಯಾತ್ರೆ ಮೂಲಕ ದಲಿತರಲ್ಲಿ ಸಂಚಲನ ಮೂಡಿಸಿದ ಪಾರ್ಥಸಾರಥಿಯ ಕನಸು ನನಸಾಗುವ ಕಾಲ ಬಂದಿದೆ. ಆದರೆ ಮೈಮರೆತು ಕುಳಿತುಕೊಳ್ಳುವಂತಿಲ್ಲ. ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದ್ದರು ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಹೇಳಿದರು.

ಹೈದರಾಬಾದ್‌ನಲ್ಲಿಮಂದಕೃಷ್ಣಮಾದಿಗ ಎಂಟತ್ತು ಲಕ್ಷ ಜನ ಸೇರಿಸಿ ಪ್ರಧಾನಿ ಮೋದಿಯನ್ನು ಕರೆಸಿ ಒಳ ಮೀಸಲಾತಿ ಜಾರಿಯಾಗಲೇಬೇಕೆಂಬ ಬೇಡಿಕೆಯಿಟ್ಟರು. ಒಂದು ವೇಳೆ ಜಾರಿಯಾಗದಿದ್ದಲ್ಲಿ ನಮ್ಮ ಪರ ಯಾರು ನಿಲ್ಲುತ್ತಾರೋ ಅವರಿಗೆ ನಮ್ಮ ಮತ ಎನ್ನುವ ದಿಟ್ಟ ಸಂದೇಶ ನೀಡಿದ್ದನ್ನು ಇಲ್ಲಿ ನೆನಪಿಸಿಕೊಳ್ಳಲೇಬೇಕು. ಪಂಜಾಬ್, ಹರಿಯಾಣ, ತಮಿಳುನಾಡು, ಕರ್ನಾಟಕ, ಆಂಧ್ರದಲ್ಲಿ ಹೋರಾಟ ತೀವ್ರಗೊಂಡ ಪರಿಣಾಮ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಮೊದಲು ಒಳ ಮೀಸಲಾತಿಯನ್ನು ಪಡೆದುಕೊಳ್ಳೋಣ. ಕೆನೆ ಪದರ ವಿಚಾರ ಬೇಡ. ಏಕೆಂದರೆ ಸರ್ಕಾರ ಕೆನೆಪದರ ಮುಂದಿಟ್ಟುಕೊಂಡು ಒಳ ಮೀಸಲಾತಿ ಜಾರಿಗೊಳಿಸುವುದನ್ನು ತಡ ಮಾಡುಬಹುದೆಂಬ ಸೂಕ್ಷ್ಮತೆಯನ್ನು ಅಂಬಣ್ಣ ಅರೋಲಿಕರ್ ಪ್ರಸ್ತಾಪಿಸಿದರು.

ಒಳ ಮೀಸಲಾತಿ ತತ್ವ ಪಾರ್ಥಸಾರಥಿಯ ತತ್ವಗಾಗಿತ್ತು. ತಾರ್ಕಿಕ ಅಂತ್ಯ ಕಾಣಬೇಕಿದೆ. ಕೆನೆ ಪದರ ಕುತಂತ್ರಕ್ಕೆ ಬಲಿಯಾಗುವುದು ಬೇಡ. ಒಳ ಮೀಸಲಾತಿಯನ್ನು ತೆಗೆದುಕೊಳ್ಳುವುದಕ್ಕೆ 75 ವರ್ಷ ಬೇಕಾಯಿತಾ? ಸುಪ್ರೀಂಕೋರ್ಟ್ ತೀರ್ಪು ಮಾದಿಗರಿಗೆ ಗೆಲುವು ಸಿಕ್ಕಂತಾಗಿದೆ. ಇದೊಂದು ನ್ಯಾಯಯುತವಾದ ಹೋರಾಟ. ರಾಜ್ಯ ಸರ್ಕಾರ ಜಾರಿಗೊಳಿಸುತ್ತದೆಂಬ ನಂಬಿಕೆಯಿದೆ. ಆದರೆ ಒತ್ತಡ ಹೇರುತ್ತಿರಬೇಕೆಂದರು.

ಕನ್ನಡ ಭಾರತಿ ಕುವೆಂಪು ವಿಶ್ವವಿದ್ಯಾನಿಲಯ ಶಂಕರಘಟ್ಟದ ನಿರ್ದೇಶಕ ಡಾ.ಶಿವಾನಂದ ಕಳೆಗಿನಮನಿ ಮಾತನಾಡಿ ವಿಶ್ವವಿದ್ಯಾನಿಲಯಗಳಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹುಟ್ಟುಹಾಕಿದ ಪ್ರೊ.ಬಿ.ಕೃಷ್ಣಪ್ಪನವರ ಪೀಠ ಸ್ಥಾನಪನೆಯಾಗಬೇಕೆಂದು ಮೊಟ್ಟ ಮೊದಲು ಧ್ವನಿಯೆತ್ತಿದ ಹೋರಾಟಗಾರ ಪಾರ್ಥಸಾರಥಿಯಲ್ಲಿ ವಿಶಾಲವಾದ ತಿಳುವಳಿಕೆಯಿತ್ತು. ರಾಜಕಾರಣಿಗಳು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಒಳ ಮೀಸಲಾತಿ ಕುರಿತು ಸದಾ ಸಂಪರ್ಕದಲ್ಲಿರುತ್ತಿದ್ದ. ವಿಶ್ವವಿದ್ಯಾನಿಲಯಗಳ ಮೇಷ್ಟ್ರುಗಳಿಗೂ ಇಲ್ಲದಷ್ಟು ಅರಿವು ಆತನಲ್ಲಿತ್ತು. ಕರ್ನಾಟಕದ ಚರಿತ್ರೆಯನ್ನು ತುದಿ ನಾಲಿಗೆಯಲ್ಲಿರಿಸಿಕೊಂಡಿದ್ದ ಎಂದು ಹೋರಾಟದ ಹಾದಿಯನ್ನು ನೆನಪಿಸಿಕೊಂಡರು.

ಸಾಂಸ್ಕೃತಿಕನಾಯಕರನ್ನುಬೆಳಕಿಗೆತರುವ ಹಂಬಲದಲ್ಲಿದ್ದ ಪಾರ್ಥಸಾರಥಿಯಲ್ಲಿ ಸೂಕ್ಷ್ಮ ಸಂವೇದನೆಯಿತ್ತು. ಸಮಾಜದ ಹಿತಕ್ಕಾಗಿ ಆತನ ಹೋರಾಟ ಪ್ರಾಮಾಣಿಕವಾಗಿತ್ತು ಎಂದು ಹೇಳಿದರು.




# ನನ್ನ ಜನರಿಗೆ ನಾನೇ ರೋಲ್ ಮಾಡಲ್

– ಬಾಬಾ ಸಾಹೇಬ್

## ಡಾ.ಬಿ.ಆರ್.ಅಂಬೇಡ್ಕರ್

ಬಾಬಾ ಸಾಹೇಬ್ ಅಂಬೇಡ್ಕರ್‌ರವರುಯಾವಾಗ ತಮಿಳುನಾಡಿಗೆ ಭೇಟಿಕೊಟ್ಟರೂ ಏರ್ ಪೋರ್ಟ್ ಪಕ್ಕದ "ಕೊನೆಮಾರ್" ಎಂಬ 5 ಣಚಿಡಿ ಹೋಟಲ್ ನಲ್ಲಿಯೇ ತಂಗುತ್ತಿದ್ದರು. ಒಮ್ಮೆ "ದಿ ಹಿಂದೂ" ಆಂಗ್ಲ ಪತ್ರಿಕೆಯ ಸಂಪಾದಕರು ಬಾಬಾ ಸಾಹೇಬರನ್ನು ಕುರಿತು ಒಂದು ಪ್ರಶ್ನೆ ಕೇಳುತ್ತಾರೆ.

"ನೀವು ಒಂದು ಸಾಧಾರಣ ಅಸ್ಪೃಶ್ಯ ಕುಟುಂಬದಲ್ಲಿ ಹುಟ್ಟಿದವರು. ಆದರೆ ನೀವು ಮಾತ್ರ ಯಾವ ಮಹಾರಾಜನಿಗೂ ಕಡಿಮೆಯಿಲ್ಲ, ಯಾವಾಗಲೂ ದುಬಾರಿ ಸೂಟನ್ನೇ ಹಾಕುತ್ತೀರಿ, ಇಂತಹ ಸ್ಟಾರ್ ಹೋಟಲ್ ನಲ್ಲಿಯೇ ತಂಗುತ್ತೀರಿ. ಆದರೆ ಗಾಂಧಿಯವರು ಉನ್ನತ ವೈಶ್ಯ ಕುಟುಂಬದಲ್ಲಿ ಜನಿಸಿದವರು, ಸರಳವಾದ ಉಡುಪು ಧರಿಸುತ್ತಾರೆ, ಭಂಗೀ ಕಾಲೊನಿಯಲ್ಲೇ (ಅಸ್ಪೃಶ್ಯ ಕಾಲೋನಿ) ತಂಗುತ್ತಾರೆ.


ನಿಮ್ಮಿಬ್ಬರಮಧ್ಯೆಇರುವಈವಿರೋಧಾಭಾಸವು ನನಗೆ ಅರ್ಥವಾಗುತ್ತಿಲ್ಲ ದಯವಿಟ್ಟು ತಿಳಿಸಿ" ಎನ್ನುತ್ತಾರೆ. ಆಗ ಬಾಬಾ ಸಾಹೇಬರು ಹೇಳಿದ ಮಾತುಗಳಿವು

"ನೀವು ಹೇಳುವುದು ಸತ್ಯ, ನನ್ನ ಸಮುದಾಯ ಸಾವಿರಾರು ವರ್ಷಗಳಿಂದ ಬಡತನದಲ್ಲಿಯೇ ಇದೆ, ಉಡಲು ಸರಿಯಾದ ಬಟ್ಟೆಯಿಲ್ಲ, ಆದರೆ ನಾನು ದುಬಾರಿ ಸೂಟನ್ನೇ ಹಾಕುತ್ತೇನೆ.. ರಾಜಗೃಹದಂತ ಬಂಗಲೆ ಕಟ್ಟಿಸಿದ್ದೇನೆ, ಇದೇ ವೇಳೆಗೆ ಗಾಂಧಿ ವೈಶ್ಯ ಸಮುದಾಯದಲ್ಲಿ ಹುಟ್ಟಿದ್ದರೂ ಅರೆಬೆತ್ತಲೇ ಫಕೀರನಂತೆ ಇದ್ದಾರೆ, ಭಂಗಿ ಕಾಲೋನಿಯಲ್ಲೇ ವಸತಿ ಮಾಡುತ್ತಾರೆ. 'ಆದರೆ ಗಾಂಧಿ ಸಮುದಾಯವು ಗಾಂಧಿಯನ್ನು ಅನುಕರಿಸುವುದಿಲ್ಲ, ತಮ್ಮ ಸಮುದಾಯ ತನ್ನಂತೆಯೇ ಫಕೀರರಾಗಬೇಕೆಂಬ ಉದ್ದೇಶ ಗಾಂಧಿಗೂ ಇಲ್ಲ..

ಆದರೆ ನನ್ನ ಸಮುದಾಯ ನನ್ನಂತೆಯೇ ಬದುಕಬೇಕೆಂಬುದು ನನ್ನ ಮಹಾತ್ವಾಕಾಂಕ್ಷೆಯಾಗಿದೆ. ನಾನು ನನ್ನ ಸಮುದಾಯದ ಕಾಲೋನಿಗೆ ಹೋಗುವುದಿಲ್ಲ ಅವರನ್ನೇ ಇಲ್ಲಿಗೆ (ಸ್ಟಾರ್ ಹೋಟಲ್) ಕರೆಸಿಕೊಳ್ಳುತ್ತೇನೆ. ನನ್ನನ್ನು ಕಾಣಲು ಜೀವನದಲ್ಲಿ ಮೊಟ್ಟಮೊದಲ ಬಾರಿ ಸ್ಟಾರ್ ಹೋಟಲ್ ಗೆ ಬರುತ್ತಾರೆ. ಇರುವ ಬಟ್ಟೆಗಳಲ್ಲಿಯೇ ಶುದ್ಧವಾದ ಬಟ್ಟೆ ಹಾಕಿಕೊಂಡು ಬರುವ ನನ್ನ ಜನಗಳು ಇಲ್ಲಿನ ಸೌಂದರ್ಯವನ್ನು ನೋಡಿ ಅನುಭವಿಸಬೇಕೆಂಬ ಸಣ್ಣ ಆಸೆ ಹುಟ್ಟುತ್ತದೆ. ಹಾಗೇ ಬಂದು ನನ್ನನ್ನು ನೋಡುತ್ತಾರೆ, ನನ್ನ ನೋಡಿದ ಮೇಲೆ ಅವರಿಗೆ ಸಣ್ಣ ಆಲೋಚನೆ ಹೊಳೆಯುತ್ತದೆ" ಇದೇ ಸಮುದಾಯದಲ್ಲಿ ಹುಟ್ಟಿದ ಬಾಬಾ ಸಾಹೇಬರು ಇಂತಹ ಸ್ಥಾನಕ್ಕೆ ಹೋಗುವುದಾದರೆ ನಾವು ಆಗಬಹುದಲ್ಲವೇ" ಎಂಬ ಆಲೋಚನೆ ಹುಟ್ಟುತ್ತದೆ.ಆದರೆ ಗಾಂಧಿ ಇಂತಹ ಸಣ್ಣ ಆಸೆಯೂ ಹುಟ್ಟದ ಹಾಗೆ ನನ್ನ ಸಮುದಾಯವನ್ನು ದಾರಿ ತಪ್ಪಿಸುತ್ತಿದ್ದಾರೆ. ನನ್ನ ಸಮುದಾಯಗಳ ಕಾಲೋನಿಗೆ ಹೋಗಿ ಗಾಂಧಿಯೂ ಭಂಗಿ ಕೆಲಸ ಮಾಡುತ್ತಾರೆ, ಚಿಂದಿ ಬಟ್ಟೆಉಡುತ್ತಾರೆ. ಇದನ್ನು ನೋಡುವ ನನ್ನ ಜನಗಳು "ಇಂತಹ ಉನ್ನತ ಕುಲದಲ್ಲಿ ಹುಟ್ಟಿದ ಗಾಂಧಿಯೇ ಭಂಗಿ ಕೆಲಸ ಮಾಡುತ್ತಿರಬೇಕಾದರೆ ನಾವ್ಯಾಕೆ ಮಾಡಬಾರದು, ಗಾಂಧಿಯೇ ಚಿಂದಿ ಬಟ್ಟೆ ಉಟ್ಟು ಓಡಾಡಬೇಕಾದರೆ ನಮಗ್ಯಾಕೆ ಬೇಕು ಒಳ್ಳೆ ಬಟ್ಟೆಗಳು"_ ಎಂದು ಭಾವಿಸುತ್ತಾರೆ. ಗಾಂಧಿ ಮಾಡುತ್ತಿರುವ ದೊಡ್ಡ ಮೋಸವಿದು. ನನ್ನ ಜನಗಳಲ್ಲಿ ಆಸೆಯನ್ನೇ ಹುಟ್ಟದ ಹಾಗೆ ಮಾಡುತ್ತಿದ್ದಾರೆ."ಆಸೆಗಳೇ ಇಲ್ಲದ ಸಮುದಾಯವನ್ನು ಆಯುಧಗಳು ಇಲ್ಲದೆಯೇ ಜಯಿಸಬಹುದು", ಗಾಂಧಿ ನನ್ನ ಸಮುದಾಯಗಳನ್ನು ಅದೇ ಹಾಳು ಕೊಂಪೆಯಲ್ಲಿ ಬಂದಿಸಿಡುವ ಹುನ್ನಾರ ಮಾಡುತ್ತಿದ್ದಾರೆ."ನನ್ನ ಜನ ಹೇಗಿರಬೇಕೆಂದರೆ ನನ್ನ ಹಾಗೆಯೇ ಇರಬೇಕು, ನಾನೇ ಅವರಿಗೆ ರೋಲ್ ಮಾಡಲ್".

ಜೈ ಭೀಮ್

» **ಲೇಖಕರು: ಅರುಣ್ ಜೋಳದಕೂಡ್ಲಿಗಿ,**
**ಜನಪದ ಕವಿ ಚರಿತೆ ಕುರಿತಂತೆ**
**ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದಲ್ಲಿ**
**ಪೋಸ್ಟ್ ಡಾಕ್ಟರಲ್ ಫೆಲೋ**
**ಸಂಶೋಧನೆಯ ವಿದ್ಯಾರ್ಥಿ**



## ಸ್ವಾತಂತ್ರ್ಯ ದಿನಾಚರಣೆ: ನಶಾಮುಕ್ತ ಅಭಿಯಾನದ ವಿವಿಧ ಕಾರ್ಯಕ್ರಮ ಆಯೋಜನೆಗೆ ಸೂಚನೆ

**ದಾವಣಗೆರೆ:** ಕೇಂದ್ರ ಸರ್ಕಾರದಿಂದ 78 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಶಾಮುಕ್ತ ಭಾರತ ಅಭಿಯಾನದ ಪ್ರಯುಕ್ತ ಜಿಲ್ಲೆಯ ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಮಾದಕ ವಸ್ತುಗಳ ಕುರಿತು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಆಗಸ್ಟ್ 12 ರಂದು ಬೆಳಗ್ಗೆ 9 ಗಂಟೆಗೆ ಎಲ್ಲಾ ಶಾಲಾ, ಕಾಲೇಜು, ಮಹಾವಿದ್ಯಾನಿಲಯ, ತಾಂತ್ರಿಕ ಶಿಕ್ಷಣ ಕಾಲೇಜು, ವೈದ್ಯಕೀಯ ಕಾಲೇಜು, ಐಟಿಐ, ಪಾಲಿಟೆಕ್ನಿಕ್, ಫ್ಯಾಷನ್ ಇನ್ಸ್‌ಟಿಟ್ಯೂಟ್, ಪ್ಯಾರಾಮೆಡಿಕಲ್ ಕಾಲೇಜುಗಳು ಸೇರಿದಂತೆ ಎಲ್ಲಾ ಸಾರ್ವಜನಿಕ ಸಂಸ್ಥೆಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸಬೇಕು. ಪ್ರತಿಜ್ಞೆ ಸ್ವೀಕರಿಸುವ ಸಂದರ್ಭದಲ್ಲಿ ಫೋಟೋ, ವೀಡಿಯೋ ಮಾಡಲು ಬ್ಯಾಕ್ ಡ್ರಾಪ್ ಅಳವಡಿಸಬೇಕು. ಶೈಕ್ಷಣಿಕ ಸಂಸ್ಥೆಗಳಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾಡಿ ಮತ್ತು ವಿಚಾರಗೋಷ್ಠಿ, ರ್‍ಯಾಲಿ, ಮ್ಯಾರಾಥಾನ್, ಬೀದಿನಾಟಕಗಳ ಮೂಲಕ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಮತ್ತು ಶಾಲಾ, ಕಾಲೇಜಿನ ಆವರಣದಲ್ಲಿ ನಶಾಮುಕ್ತ ಭಾರತದ ಅಂಗವಾಗಿ ಸಸಿಗಳನ್ನು ನೆಡಬೇಕು. ಆಗಸ್ಟ್ 12 ರಿಂದ 15 ರ ವರೆಗೆ ನಶಾಮುಕ್ತ ಭಾರತ ಅಭಿಯಾನದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಫೋಟೋ, ವೀಡಿಯೋಗಳನ್ನು ನಶಾಮುಕ್ತ ಭಾರತ ಅಭಿಯಾನ ಆಪ್‌ನಲ್ಲಿ ಅಪ್‌ಲೋಡ್ ಮಾಡಲು ತಿಳಿಸಬೇಕೆಂದು ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕರ ಆರೋಗ್ಯ ಭಾಗ್ಯಕ್ಕೆ ಒತ್ತು: ಸಂತೋಷ್

» **ಚಳ್ಳಕೆರೆ**

ಪ್ರತಿನಿತ್ಯ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಮೂಲಕ ಶಿಕ್ಷಕರು ತಮ್ಮ ಕರ್ತವ್ಯವನ್ನು ನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಜ್ಞಾನಭಾಗ್ಯ ನೀಡುವ ಶಿಕ್ಷಕರ ಆರೋಗ್ಯ ಭಾಗ್ಯವನ್ನು ಕಲ್ಪಿಸುವದೃಷ್ಠಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಲಿಟಲ್ ಪ್ಲವರ್ ಆಂಗ್ಲಮಾದ್ಯಮ ಶಾಲೆಯ ಆಡಳಿತಾಧಿಕಾರಿ ಎಂ.ಸಂತೋಷ ತಿಳಿಸಿದರು.

ಅವರು, ಶನಿವಾರ ಶಾಲಾ ಆವರಣದಲ್ಲಿ ಶಾಲೆ ಶಿಕ್ಷಕರು, ಪೋಷಕರು ಹಾಗೂ ಸಿಬ್ಬಂದಿ ವರ್ಗಕ್ಕೆ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಬೆಂಗಳೂರಿನ ವೈದೇಹಿ ಆಸ್ಪತ್ರೆ ತಜ್ಞ ವೈದ್ಯರು ಈ ಶಿಬಿರದಲ್ಲಿ ಭಾಗವಹಿಸಿ ಆರೋಗ್ಯ ತಪಾಸಣೆ ನಡೆಸಿದರು. ಶಿಕ್ಷಕರೂ ಸಹ ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಗಮನ ನೀಡಬೇಕಾಗುತ್ತದೆ. ಪ್ರತಿನಿತ್ಯ ಪಾಠಮಾಡುವುದರಿಂದ ಸಾಕಷ್ಟು ಸಣ್ಣಪುಟ್ಟ ಸಮಸ್ಯೆಗಳು ಅವರ ಆರೋಗ್ಯ ಹದಗೆಡಿಸಬಹುದಾಗಿದೆ. ಆದ್ದರಿಂದ ಆಡಳಿತ ಮಂಡಳಿ ಉಚಿತ ಆರೋಗ್ಯ ತಪಾಸಣೆ ಮೂಲಕ ಎಲ್ಲರೂ ಆರೋಗ್ಯವಂತರಾಗಿ ಬಾಳಬೇಕೆಂಬ ಅಭಿಲಾಷೆಯಿಂದ ಈ ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದರು.

ವೈದೇಹಿ ಆಸ್ಪತ್ರೆಯ ಕೋಆಡಿನೇಟರ್ ಹರೀಶ್‌ಕುಮಾರ್ ಮಾತನಾಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಶಾಲೆಯ ಆಡಳಿತ ಮಂಡಳಿ ಸಹಯೋಗದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ಪೋಷಕರು, ಶಿಕ್ಷಣ ನೀಡುವ ಗುರುಗಳ ಆರೋಗ್ಯದ ಬಗ್ಗೆ ಗಮನಹರಿಸುವುದು ಸಹ ಒಂದು ಉತ್ತಮ ಕೆಲಸ ಈ ಶಾಲೆಯ ಆಡಳಿತ ಮಂಡಳಿ ನಮಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಕೈಗೊಳ್ಳಲು ಎಲ್ಲಾ ರೀತಿಯ ಸಹಕಾರ ನೀಡಿದೆ. ಪ್ರತಿಯೊಬ್ಬರಲ್ಲೂ ಆರೋಗ್ಯ ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಸಹಕಾರಿ ಎಂದರು.



ಮುಖ್ಯ ಶಿಕ್ಷಕಿ ಪಿ.ಮಮತ ಮಾತನಾಡಿ, ಇಂದು ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ನಮ್ಮ ಶಾಲೆಯ ಎಲ್ಲಾ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ಪೋಷಕರು ಪಾಲ್ಗೊಂಡು ಆರೋಗ್ಯ ತಪಾಸಣೆಗೆ ಒಳಗಾಗಿದ್ದಾರೆ. ವೈದ್ಯರ ತಂಡವೂ ಸಹ ಪ್ರತಿಯೊಬ್ಬರ ಆರೋಗ್ಯವನ್ನು ಪರಿಶೀಲನೆ ನಡೆಸಿ ಮಾರ್ಗದರ್ಶನ ನೀಡಿದೆ. ಶಾಲೆಯಲ್ಲೇ ಈ ಕಾರ್ಯಕ್ರಮ ನಡೆದಿರುವುದು ಸಂತಸ ತಂದಿದೆ. ಪ್ರತಿನಿತ್ಯ ಶಾಲಾ ಚಟುವಟಿಕೆಗಳ ಬಗ್ಗೆ ಗಮನ ನೀಡುವ ನಾವೆಲ್ಲರೂ ಆರೋಗ್ಯದ ಬಗ್ಗೆಯೂ ಹೆಚ್ಚು ಒತ್ತು ನೀಡಬೇಕೆಂಬುವುದು ಸತ್ಯವೆಂದರು. ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ರೇಖಾ, ಮಂಜುನಾಥರೆಡ್ಡಿ, ನಟರಾಜ್, ಮುಖ್ಯ ಶಿಕ್ಷಕ ಎನ್.ಮಂಜುನಾಥ, ಶಿಕ್ಷಕರಾದ ತಿಪ್ಪೇಸ್ವಾಮಿ, ಅಭಿಲಾಶ್, ಜಯಪ್ರಕಾಶ್, ಮಹಂತೇಶ್, ಹನುಮಂತರಾಯ, ಮಹಾಲಕ್ಷ್ಮಿ, ಲಕ್ಷ್ಮಿ, ಭಾರತಿ, ಹೀನಾ, ಗೌತಮಿ, ಕಮಲ, ರಾಧ, ಶಾರದ ಮುಂತಾದವರು ಭಾಗವಹಿಸಿದ್ದರು.

## 159 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ




» **ಹೊಸದುರ್ಗ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕಿನ ಹಾಲುರಾಮೇಶ್ವರ ಯೋಜನಾ ಕಛೇರಿಯಲ್ಲಿ ಸುಜ್ಞಾನಾ ನಿಧಿಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣೆ ಕಾರ್ಯಕ್ರಮನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರದ ಯೋಜನಾಧಿಕಾರಿ ಚಂದ್ರಶೇಖರ್ ಒಂದು ಗ್ರಾಮ ಮತ್ತು ಒಂದು ಕುಟುಂಬವನ್ನು ಬಲಪಡಿಸುವ ನಿಟ್ಟಿನಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಆರ್ಥಿಕವಾಗಿ ಶೈಕ್ಷಣಿಕವಾಗಿ ಬೌದ್ಧಿಕವಾಗಿ ಮತ್ತು ಸದೃಡವಾಗಿ ಬೆಳೆಯುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ನೀಡುತ್ತಿರುವುದು ಶ್ಲಾಘನೀಯ. ಈ ಬಾರಿ ವೃತ್ತಿಪರ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ 159 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯವೇತನ ನೀಡಲಾಗುತ್ತಿದೆ ಎಂದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಡಿದ ಬಿಇಓ ಸೈಯದ್ ಮೊಸಿನ್ ಇಂದಿನ ದಿನಮಾನಗಳಲ್ಲಿ ಸರ್ಕಾರ ಮಾಡದಿರುವ ಕೆಲಸವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಾಡುತ್ತಿದೆ. ಧರ್ಮಸ್ಥಳದ ಧರ್ಮಧಿಕಾರಿಗಳಾದ ಶ್ರೀ ಡಾ॥ ಡಿ.ವಿರೇಂದ್ರ ಹೆಗ್ಗಡೆಯವರು ಇಂತಹ ಸಮಾಜಮುಖಿ ಕೆಲಸವನ್ನು ಮಾಡುತ್ತಿರಿವುದು ಶ್ಲಾಘನೀಯ ಎಂದರು.

## ಹಾಸ್ಟೆಲ್‌ಗಳಿಗೆ ವಿದ್ಯಾರ್ಥಿಗಳಿಂದ ಅರ್ಜಿ

» **ದಾವಣಗೆರೆ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಪ್ರಸಕ್ತ ವರ್ಷ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.4 ಕೊನೆಯ ದಿನವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಇಲಾಖೆಯ ವೆಬ್ ಸೈಟ್ https://bcwd.karnataka.gov.inನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ, ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 8050770004 ಮತ್ತು 8050770005 ಸಂಪರ್ಕಿಸಲು ಬಿಸಿಎಂ ಅಧಿಕಾರಿ ಗಾಯತ್ರಿ ತಿಳಿಸಿದ್ದಾರೆ.

## ಗುಡ್ಡದ ನೇರಲಕೆರೆ ಗ್ರಾಮದಲ್ಲಿ ಅನುಭಾವ ಶ್ರಾವಣ

» **ಹೊಸದುರ್ಗ**

ಚಿತ್ರದುರ್ಗದ ಶ್ರೀಜಗದ್ಗರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಆಯೋಜಿಸಿರುವ ಅನುಭಾವ ಶ್ರಾವಣ ಕಾರ್ಯಕ್ರಮವು ತಾಲ್ಲೂಕಿನ ಗುಡ್ಡದ ನೇರಲಕೆರೆ ಗ್ರಾಮದಲ್ಲಿ ಆಗಸ್ಟ್ 12 ರಂದು ಸೋಮವಾರ ಸಂಜೆ 6 ಗಂಟೆಗೆ ಏರ್ಪಡಿಸಿಲಾಗಿದ್ದು ಇದೇ ದಿನ ಬೆಳಗ್ಗೆ ಚಿತ್ರದುರ್ಗದ ಬಸವೇಶ್ವರ ವೈದ್ಯಕೀಯ ಆಸ್ಪತ್ರೆಯ ತಜ್ಞ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆಸಂಜೆ 5-30 ಗಂಟೆಗೆ ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮವಿದ್ದು ನಂತರ ಸಭಾ ಕಾರ್ಯಕ್ರಮವು ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಆಡಳಿತ ಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮಿಗಳವರು, ಕುಂಚಿಟಿಗ ಸಂಸ್ಥಾನ ಮಠದ ಡಾ.ಶಾಂತವೀರ ಸ್ವಾಮೀಜಿಯವರ ಹಾಗೂ ಇನ್ನುಳಿದ ಮಹಾಸ್ವಾಮಿಗಳವರ ಸಮ್ಮುಖದಲ್ಲಿ ನಡೆಯುವ ಶಿವಾನುಭವ ಗೋಷ್ಠಿಯಲ್ಲಿ ಜಯದೇವ ಜಗದ್ಗುರು ನಿವೃತ್ತ ಪ್ರಾಚಾರ್ಯ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಅವರು ಉಪನ್ಯಾಸ ನೀಡಲಿದ್ದಾರೆ.

## ಪಿ.ಲಂಕೇಶ್ ಕೃತಿಗಳ ಅಧ್ಯಯನ ಶಿಬಿರ

» **ಚಿತ್ರದುರ್ಗ**

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕನ್ನಡ ಜಾಣ-ಜಾಣೆಯರ ವೇದಿಕೆ ಬೆಂಗಳೂರು ಇವರ ಸಹಯೋಗದಲ್ಲಿ 2024ರ ಸೆಪ್ಟೆಂಬರ್ ಕೊನೆಯ ವಾರದಲ್ಲಿ ಹಾಸನ ಜಿಲ್ಲೆಯಲ್ಲಿ ರಾಜ್ಯಮಟ್ಟದ ಮೂರು ದಿನಗಳ ಪಿ.ಲಂಕೇಶ್ ಕೃತಿಗಳ ಅಧ್ಯಯನ ಶಿಬಿರವನ್ನು ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿ ಇರುವ 20 ರಿಂದ 40 ವರ್ಷ ವಯಸ್ಸುಳ್ಳ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು 2024ರ ಆಗಸ್ಟ್ 17 ಕೊನೆಯ ದಿನ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ಇಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್.ಕರಿಯಪ್ಪ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T